ಸೋಮವಾರ 03.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 89
Digital Varthe Kannada Daily
Volume 01 - Issue 89
Monday 03.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಅನುಮಾನಾಸ್ಪದವಾಗಿ ಸಾವನ್ನಪ್ಪಿದ ಯುವತಿಯ ಮೃತದೇಹ ಪತ್ತೆ



**ಬೆಂಗಳೂರು**: ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ ಮತ್ತೊಂದು ದಾರುಣ ಘಟನೆ ನಡೆದಿದೆ. 25 ವರ್ಷದ ಯುವತಿ ಅನುಮಾನಾಸ್ಪದ ಸಾವನ್ನು ಕಂಡಿದ್ದು, ಆಕೆಯ ಮೃತದೇಹ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿದೆ. ಮೃತಳನ್ನು ದಾವಣಗೆರೆ ಜಿಲ್ಲೆಯ ಮೂಲದ ಸುಪ್ರಿಯಾ ಎಂದು ಗುರುತಿಸಲಾಗಿದೆ. ಎಂಬಿಎ ಪದವಿ ಪಡೆದಿದ್ದ ಸುಪ್ರಿಯಾ, ಬೈಕ್ ರೈಡಿಂಗ್ ತರಬೇತಿ ಪಡೆಯುತ್ತಿದ್ದಳು ಎನ್ನಲಾಗಿದೆ. ಈ ಘಟನೆ ಸುಬ್ರಹ್ಮಣ್ಯನಗರದ ಮಿಲ್ಕ್ ಕಾಲೋನಿಯಲ್ಲಿರುವ ಬಾಡಿಗೆ ಮನೆಯಲ್ಲಿ ನಡೆದಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಸುಪ್ರಿಯಾ ಕಳೆದ ಎರಡು ವರ್ಷಗಳಿಂದ ಹೆಚ್ಚು ಕಾಲ ಸುಬ್ರಹ್ಮಣ್ಯನಗರದ ಮೂರನೇ ಮಹಡಿಯ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದಳು. ಆಕೆಯ ಮನೆ ಗಾಯತ್ರಿನಗರದ ಸಮೀಪದಲ್ಲಿದ್ದು, ಏಕಾಂಗಿಯಾಗಿ ಜೀವನ ನಡೆಸುತ್ತಿದ್ದಳು. ಕಳೆದ ಎರಡು ದಿನಗಳಿಂದ ಆಕೆಯ ಕೋಣೆಯ ಬಾಗಿಲು ಲಾಕ್ ಆಗಿತ್ತು. ಇದರಿಂದ ಅನುಮಾನಗೊಂಡ ಮನೆ ಮಾಲೀಕರು ಇಂದು ಬಾಗಿಲು ತೆರೆದಾಗ ದಾರುಣ ದೃಶ್ಯ ಕಂಡುಬಂದಿತು. ಫ್ಯಾನ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಸ್ಥಿತಿಯಲ್ಲಿ ಮೃತದೇಹ ತುಂಡಾಗಿ ಬಿದ್ದಿತ್ತು. ಪೊಲೀಸರು ಸ್ಥಳಕ್ಕೆ ಆಗಮಿಸಿದಾಗ ದೇಹ ಸಂಪೂರ್ಣ ಕೊಳೆತ ಸ್ಥಿತಿಯಲ್ಲಿತ್ತು.

ದಾವಣಗೆರೆಯಿಂದ ಬೆಂಗಳೂರಿಗೆ ಓದು ಮತ್ತು ಉದ್ಯೋಗಕ್ಕಾಗಿ ಬಂದಿದ್ದ ಸುಪ್ರಿಯಾ, ಕಳೆದ ಎರಡು ದಿನಗಳಿಂದ ತಮ್ಮ ಪೋಷಕರ ಕರೆಗಳಿಗೆ ಸ್ಪಂದಿಸದೇ ಇದ್ದಳು. ಮೊದಲ ದಿನ ಸಾಮಾನ್ಯವೆಂದು ಭಾವಿಸಿದ್ದ ಪೋಷಕರು, ಎರಡನೇ ದಿನವೂ ಇದೇ ಸ್ಥಿತಿ ಕಂಡು ಆತಂಕಕ್ಕೀಡಾದರು. ತಕ್ಷಣ ಮನೆ ಮಾಲೀಕರಿಗೆ ಕರೆ ಮಾಡಿ ವಿಷಯ ತಿಳಿಸಿದರು. ಮನೆ ಮಾಲೀಕರು ಸ್ಥಳಕ್ಕೆ ತೆರಳಿ ಬಾಗಿಲು ತೆರೆದಾಗಲೇ ಘಟನೆ ಬಯಲಾಯಿತು.

ಸುಬ್ರಹ್ಮಣ್ಯನಗರ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸಮೀಪದ ಆಸ್ಪತ್ರೆಗೆ ರವಾನಿಸಲಾಗಿದೆ. ಪ್ರಾಥಮಿಕ ತನಿಖೆಯಲ್ಲಿ ಆತ್ಮಹತ್ಯೆಯೇ ಕಾರಣವೆಂದು ಅನುಮಾನಿಸಲಾಗಿದ್ದು, ಯುಡಿಆರ್ (ಅನುಮಾನಾಸ್ಪದ ಸಾವು) ಕೇಸ್ ದಾಖಲಿಸಿಕೊಂಡು ತನಿಖೆ ಆರಂಭಿಸಲಾಗಿದೆ. ಪೊಲೀಸರು ಮನೆಯಲ್ಲಿ ಸಿಕ್ಕ ಸಾಕ್ಷ್ಯಗಳು, ಮೊಬೈಲ್ ಡೇಟಾ ಮತ್ತು ಸುತ್ತಲಿನ ಸಿಸಿಟಿವಿ ಫೂಟೇಜ್‌ಗಳನ್ನು ಪರಿಶೀಲಿಸುತ್ತಿದ್ದಾರೆ.

## ಬೈಕ್‌ಗಳಿಗೆ ಆಂಬುಲೆನ್ಸ್ ಡಿಕ್ಕಿಯಾಗಿ ಇಬ್ಬರು ಸ್ಥಳದಲ್ಲೇ ಸಾವು



**ಬೆಂಗಳೂರು**: ಶಾಂತಿನಗರ ಬಸ್ ನಿಲ್ದಾಣ ಬಳಿ ತಡರಾತ್ರಿ ಭೀಕರ ಅಪಘಾತ ಸಂಭವಿಸಿದೆ. ರಿಚ್‌ಮಂಡ್ ಸರ್ಕಲ್‌ನಿಂದ ಅತಿವೇಗವಾಗಿ ಬಂದ ಆಂಬುಲೆನ್ಸ್‌ವೊಂದು, ರೆಡ್ ಸಿಗ್ನಲ್‌ನಲ್ಲಿ ನಿಂತ ಮೂರು ಬೈಕ್‌ಗಳಿಗೆ ಡಿಕ್ಕಿ ಹೊಡೆದಿದೆ. ಈ ಘಟನೆಯಲ್ಲಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಈ ದುರಂತದಲ್ಲಿ ಗಂಡ-ಹೆಂಡತಿ ದಂಪತಿ ಸಾವನ್ನಪ್ಪಿದ್ದು, ಮತ್ತಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಆಂಬುಲೆನ್ಸ್ ಒಳಗೆ ಯಾವುದೇ ರೋಗಿ ಇರಲಿಲ್ಲ ಎಂಬುದು ಘಟನೆಯನ್ನು ಇನ್ನಷ್ಟು ದಿಗ್ಭ್ರಮೆಗೊಳಿಸಿದೆ. ರಾತ್ರಿ ಸುಮಾರು 11 ಗಂಟೆ ಸಮಯದಲ್ಲಿ ರಿಚ್‌ಮಂಡ್ ಸರ್ಕಲ್‌ನಿಂದ ಶಾಂತಿನಗರ ಕಡೆಗೆ ವೇಗವಾಗಿ ಬಂದ ಕ್ಲೌಡ್ ನೈನ್ ಆಸ್ಪತ್ರೆಯ ಆಂಬುಲೆನ್ಸ್, ಸಿಗ್ನಲ್‌ನಲ್ಲಿ ನಿಂತಿದ್ದ ಬೈಕ್‌ಗಳಿಗೆ ಡಿಕ್ಕಿ ಹೊಡೆದಿದೆ. ಮೊದಲು ಡಿಯೊ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ ಇಸ್ಮಾಯಿಲ್ (೪೦) ಮತ್ತು ಅವರ ಪತ್ನಿ ಸಮೀನಾ ಬಾನು ದಂಪತಿಗಳ ಮೇಲೆ ಗುದ್ದಿದೆ.

ಬೈಕ್ ಸಮೇತವೇ ಇಬ್ಬರನ್ನು ಸುಮಾರು 50 ಮೀಟರ್ ದೂರ ಎಳೆದೊಯ್ದು, ನಂತರ ಮತ್ತೆರಡು ಬೈಕ್‌ಗಳಿಗೆ ಡಿಕ್ಕಿ ಹೊಡೆದು ಪೊಲೀಸ್ ಚೌಕಿಯ ಗೋಡೆಗೆ ಗುದ್ದಿ ನಿಂತಿತು. ಈ ಏಕಾಏಕಿ ಗುದ್ದಾಟದಿಂದ ಇಸ್ಮಾಯಿಲ್ ಮತ್ತು ಸಮೀನಾ ಬಾನು ದಂಪತಿಗಳು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮತ್ತೊಂದು ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ ಸಿದ್ದಿಖಿ ಎಂಬುವವರು ಸೇರಿದಂತೆ ಇಬ್ಬರು ಗಂಭೀರ ಗಾಯಗಳಾಗಿವೆ. ಅವರನ್ನು ತಕ್ಷಣವೇ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಆಂಬುಲೆನ್ಸ್‌ನಲ್ಲಿ ಯಾವುದೇ ತುರ್ತು ರೋಗಿ ಇರಲಿಲ್ಲ. ಸೈರನ್ ಹಾಕಿಕೊಂಡು ಅತಿವೇಗವಾಗಿ ಬಂದಿದ್ದರೂ, ಸಿಗ್ನಲ್‌ನಲ್ಲಿ ಬ್ರೇಕ್ ಹಾಕದೇ ನೇರವಾಗಿ ಬೈಕ್‌ಗಳ ಮೇಲೆ ಗುದ್ದಿದೆ. ಚಾಲಕನ ಈ ನಿರ್ಲಕ್ಷಕ್ಕೆ ಇಬ್ಬರು ಅಮಾಯಕ ಪ್ರಾಣಗಳು ಬಲಿಯಾದವು. ಅಪಘಾತದ ನಂತರ ಚಾಲಕ ವಾಹನದಿಂದ ಹೊರಬಂದು ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆಂಬುಲೆನ್ಸ್ ಪೊಲೀಸ್ ಚೌಕಿಗೆ ಗುದ್ದಿ ನಿಂತಿದ್ದರಿಂದ, ಸ್ಥಳಕ್ಕೆ ತಕ್ಷಣ ಪೊಲೀಸರು ಆಗಮಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಶಾಂತಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಐಪಿಸಿ ಸೆಕ್ಷನ್ 279 (ಅಜಾಗರೂಕ ಚಾಲನೆ), 304 ಎ (ಮರಣಕ್ಕೆ ಕಾರಣವಾಗುವ ನಿರ್ಲಕ್ಷ) ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿ ಚಾಲಕನನ್ನು ಪತ್ತೆಹಚ್ಚುವ ಕಾರ್ಯ ನಡೆಯುತ್ತಿದೆ.

## ರಾಜ್ಯೋತ್ಸವ ಮೆರವಣಿಗೆಯಲ್ಲಿ ಐವರಿಗೆ ಚಾಕು ಇರಿತ: ಇಬ್ಬರ ಸ್ಥಿತಿ ಗಂಭೀರ


**ಬೆಳಗಾವಿ**: ಕರ್ನಾಟಕ ರಾಜ್ಯೋತ್ಸವದ ಸಂಭ್ರಮದ ನಡುವೆಯೇ ಭಯಾನಕ ಘಟನೆ ನಡೆದಿದೆ. ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಬೆಳಗಾವಿಯ ಸದಾಶಿವನಗರದಲ್ಲಿ ಆಯೋಜಿಸಲಾಗಿದ್ದ ರೂಪಕಗಳ ಮೆರವಣಿಗೆಯ ವೇಳೆ ಐವರು ಯುವಕರ ಮೇಲೆ ದುಷ್ಕರ್ಮಿಗಳು ಚಾಕುವಿನಿಂದ ಇರಿದು ಗಾಯಗೊಳಿಸಿದ್ದಾರೆ. ಈ ಘಟನೆಯಿಂದ ಸಾರ್ವಜನಿಕರಲ್ಲಿ ಆತಂಕ ಮನೆಮಾಡಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ. ಘಟನೆಯಲ್ಲಿ ಗಾಯಗೊಂಡವರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಉಳಿದವರಿಗೆ ತೀವ್ರ ಗಾಯಗಳಾಗಿವೆ.

ರಾಜ್ಯೋತ್ಸವದ ಅಂಗವಾಗಿ ಬೆಳಗಾವಿ ನಗರದಲ್ಲಿ ಭರ್ಜರಿ ಮೆರವಣಿಗೆ ನಡೆಸಲಾಗುತ್ತಿತ್ತು. ಸಾವಿರಾರು ಜನರು ಸೇರಿ ರೂಪಕಗಳು, ನೃತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಉತ್ಸವ ಸಡಗರದಲ್ಲಿ ಮುಳುಗಿದ್ದರು. ಇದೇ ಸಮಯದಲ್ಲಿ, ಮೆರವಣಿಗೆ ಗುಂಪಿನಲ್ಲಿ ಏಕಾಏಕಿ ಬಂದ ದುಷ್ಕರ್ಮಿಗಳ ತಂಡ ದಾಳಿ ನಡೆಸಿತು. ದುಷ್ಕರ್ಮಿಗಳು ಆಯ್ದ ಐವರು ಯುವಕರ ಮೇಲೆ ಚಾಕುವಿನಿಂದ ಇರಿದು, ಕ್ಷಣಾರ್ಧದಲ್ಲಿ ಪರಾರಿಯಾಗಿದ್ದಾರೆ.. ಸ್ಥಳದಲ್ಲಿ ಗೊಂದಲ ಮತ್ತು ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಜನರು ಓಡಾಡಲಾರಂಭಿಸಿದರು.

ಗಾಯಗೊಂಡವರು ಗುರುನಾಥ ವಕ್ಕುಂದ (ಅಥವಾ ಒಕ್ಕುಂದ), ಸಚಿನ್ ಕಾಂಬಳೆ, ಲೋಕೇಶ್ ಬೆಟಗೇರಿ, ಮಹೇಶ್, ವಿನಾಯಕ ಮತ್ತು ನಜೀರ್ ಪಠಾಣ್ ಎಂದು ಗುರುತಿಸಲಾಗಿದೆ. ಈ ಐವರೂ ಸ್ಥಳೀಯ ನಿವಾಸಿಗಳೇ ಆಗಿದ್ದು, ಮೆರವಣಿಗೆಯಲ್ಲಿ ಭಾಗವಹಿಸುತ್ತಿದ್ದರು. ದಾಳಿಯ ನಂತರ ತಕ್ಷಣವೇ ಸ್ಥಳೀಯರು ಮತ್ತು ಪೊಲೀಸರು ಸ್ಪಂದಿಸಿ, ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಿದರು. ಮೂವರನ್ನು ಬೆಳಗಾವಿ ವೈದ್ಯಕೀಯ ಮಹಾವಿದ್ಯಾಲಯದ ಬಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇಬ್ಬರನ್ನು ಖಾಸಗಿ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ವೈದ್ಯರು ತಿಳಿಸಿದಂತೆ, ಇಬ್ಬರ ಸ್ಥಿತಿ ಗಂಭೀರವಾಗಿದ್ದು, ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಸದಾಶಿವನಗರದ ಲಕ್ಷ್ಮೀ ಕಾಂಪ್ಲೆಕ್ಸ್ ಬಳಿ ಮತ್ತು ಚೆನ್ನಮ್ಮ ಸರ್ಕಲ್ ಸಮೀಪದಲ್ಲಿ ಈ ದಾಳಿ ನಡೆದಿದೆ. ಪೊಲೀಸರು ಸ್ಥಳಕ್ಕೆ ಧಾವಿಸಿ, ಸಾಕ್ಷ್ಯ ಸಂಗ್ರಹಿಸುತ್ತಿದ್ದಾರೆ. ಸಿಸಿಟಿವಿ ಫೂಟೇಜ್ ಪರಿಶೀಲನೆ, ಸಾಕ್ಷಿಗಳ ಹೇಳಿಕೆ ಮತ್ತು ದುಷ್ಕರ್ಮಿಗಳನ್ನು ಹುಡುಕುವ ಕಾರ್ಯಾಚರಣೆ ಆರಂಭವಾಗಿದೆ. ಆದರೆ, ದಾಳಿಯ ಹಿಂದಿನ ಕಾರಣ ಇನ್ನೂ ಸ್ಪಷ್ಟವಾಗಿಲ್ಲ. ಹಿಂದಿನ ವೈಯಕ್ತಿಕ ದ್ವೇಷ, ಗ್ಯಾಂಗ್ ವಾರ್ ಅಥವಾ ಇತರ ಕಾರಣಗಳಿರಬಹುದು ಎಂದು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಟೈಮ್ ಪಾಸ್ ಪ್ರೀತಿ ಬೇಡ, ಮದುವೆ ಆಗೋಣ ಎಂದಿದಕ್ಕೆ ಪ್ರಿಯತಮೆ ಕೊಲೆ





**ಬೆಂಗಳೂರು**:"ಟೈಂಪಾಸ್ ಪ್ರೀತಿ ಬೇಡ, ನನ್ನನ್ನು ಮದುವೆಯಾಗು" ಎಂದು ಪಟ್ಟು ಹಿಡಿದಿದ್ದಕ್ಕೆ ಪ್ರೇಮಿಯೇ ಪ್ರಿಯತಮೆಯನ್ನು ಬರ್ಬರವಾಗಿ ಕೊಂದ ಘಟನೆ ಅಕ್ಟೋಬರ್ 31ರ ರಾತ್ರಿ ಬೆಂಗಳೂರಿನಲ್ಲಿ ನಡೆದಿದೆ.

ಆರೋಪಿ ಅಂಬೇಡ್ಕರ್ ಅಲಿಯಾಸ್ ಕುಟ್ಟಿ (43) ಎಂಬಾತ ರೇಣುಕಾ (40) ಎಂಬ ಮಹಿಳೆಯನ್ನು ಚಾಕುವಿನಿಂದ ಏಳೆಂಟು ಬಾರಿ ಇರಿದು ಕೊಂದಿದ್ದಾನೆ.


ಕುಟ್ಟಿ ಕೆ.ಜಿ. ಹಳ್ಳಿ ನಿವಾಸಿಯಾಗಿದ್ದು, ಫೈನಾನ್ಸ್ ಕ್ಷೇತ್ರದಲ್ಲಿ ಕೆಲಸ ಮಾಡಿಕೊಂಡಿದ್ದ. ಅವನು ಈಗಾಗಲೇ ಮದುವೆಯಾಗಿ ಪತ್ನಿ ಮತ್ತು ಮಕ್ಕಳೊಂದಿಗೆ ಸಂಸಾರ ನಡೆಸುತ್ತಿದ್ದ. ಇತ್ತ ರೇಣುಕಾ ಪಿಳ್ಳಣ್ಣ ಗಾರ್ಡನ್ ನಿವಾಸಿಯಾಗಿದ್ದು, ಈ ಹಿಂದೆ ಮದುವೆಯಾಗಿ ವಿಚ್ಛೇದನ ಪಡೆದಿದ್ದಳು. ಇಬ್ಬರೂ ಒಂದೇ ಪ್ರದೇಶದಲ್ಲಿ ವಾಸಿಸುತ್ತಿದ್ದ ಕಾರಣ ಪರಿಚಯವಾಗಿತ್ತು. ಆ ಪರಿಚಯ ಕಾಲಕ್ರಮೇಣ ಪ್ರೇಮ ಸಂಬಂಧವಾಗಿ ಬೆಳೆಯಿತು ಮತ್ತು ದೈಹಿಕ ಸಂಪರ್ಕಕ್ಕೂ ಮುಂದುವರಿದಿತ್ತು.

ಸಂಬಂಧ ಆಳವಾದಂತೆ ರೇಣುಕಾ ಮದುವೆಯ ಬಗ್ಗೆ ಒತ್ತಾಯ ಹೇರತೊಡಗಿದಳು. "ಹೀಗೆ ಕದ್ದುಮುಚ್ಚಿ ಓಡಾಡುವುದು ಬೇಡ, ನಮ್ಮನ್ನು ಮದುವೆಯಾಗಿ ಸಂಸಾರ ಆರಂಭಿಸೋಣ" ಎಂದು ಪದೇಪದೇ ಹೇಳುತ್ತಿದ್ದಳು. ಆದರೆ ಕುಟ್ಟಿ ತನ್ನ ಸಂಸಾರವನ್ನು ಬಿಟ್ಟುಕೊಡಲು ಸಿದ್ಧನಿರಲಿಲ್ಲ. ಇದರಿಂದ ಇಬ್ಬರ ನಡುವೆ ಜಗಳಗಳು ಆರಂಭವಾಯಿತು.

ಅಕ್ಟೋಬರ್ 31ರ ಶುಕ್ರವಾರ ಸಂಜೆ ರೇಣುಕಾ ಕೆಲಸ ಮುಗಿಸಿಕೊಂಡು ಮನೆಗೆ ಮರಳುತ್ತಿದ್ದಳು. ಆ ಸಮಯದಲ್ಲಿ ಕುಟ್ಟಿ ಫೋನ್ ಮಾಡಿ "ನಿನ್ನೊಂದಿಗೆ ಮಾತನಾಡಬೇಕು" ಎಂದು ಹೇಳಿ ಪಿಳ್ಳಣ್ಣ ಗಾರ್ಡನ್‌ನ ಬಿಬಿಎಂಪಿ ಸರ್ಕಾರಿ ಶಾಲೆಯ ಬಳಿಗೆ ಕರೆದೊಯ್ದ. ಸಾರ್ವಜನಿಕ ಸ್ಥಳವಾಗಿದ್ದರೂ ಕುಟ್ಟಿ ಯೋಚಿಸದೇ ಹಲ್ಲೆಗಿಳಿದ. ಆಕೆಯ ಮೇಲೆ ಚಾಕುವಿನಿಂದ ಏಳೆಂಟು ಬಾರಿ ದಾಳಿ ನಡೆಸಿದ. ರೇಣುಕಾ ರಕ್ತದ ಮಡುವಿನಲ್ಲಿ ಕುಸಿದು ಬಿದ್ದಳು. ಕೂಡಲೇ ಸ್ಥಳೀಯರು ಆಕೆಯನ್ನು ಅಂಬೇಡ್ಕರ್ ಆಸ್ಪತ್ರೆಗೆ ರವಾನಿಸಿದರು. ಆದರೆ ಗಾಯಗಳು ತೀವ್ರವಾಗಿದ್ದರಿಂದ ಚಿಕಿತ್ಸೆ ಫಲಕಾರಿಯಾಗಲಿಲ್ಲ. ರೇಣುಕಾ ಆಸ್ಪತ್ರೆಯಲ್ಲೇ ಕೊನೆಯುಸಿರೆಳೆದಳು.

ಘಟನೆಯ ಬಗ್ಗೆ ತಿಳಿದು ಪೊಲೀಸರು ತ್ವರಿತ ಕಾರ್ಯಾಚರಣೆ ನಡೆಸಿದರು. ಕುಟ್ಟಿ ಕೊಲೆ ಮಾಡಿ ತಕ್ಷಣವೇ ಸ್ಥಳದಿಂದ ತಪ್ಪಿಸಿಕೊಂಡಿದ್ದ. ಆದರೆ ಸಿಸಿಟಿವಿ ದೃಶ್ಯಗಳು, ಸಾಕ್ಷಿಗಳ ಹೇಳಿಕೆ ಮೂಲಕ ಪೊಲೀಸರು ಅವನನ್ನು ಬಂಧಿಸಿದರು. ಕೆ.ಜಿ. ಹಳ್ಳಿ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ. ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಕುಟ್ಟಿಯು ತನ್ನ ಅಪರಾಧವನ್ನು ಒಪ್ಪಿಕೊಂಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ನಾಲೆಯಲ್ಲಿ ನಾಲ್ವರು ಮಕ್ಕಳು ನಾಪತ್ತೆ - ಇಬ್ಬರು ಬಾಲಕಿಯರು ಸಾವು



**ಮಂಡ್ಯ**: ಬಟ್ಟೆ ತೊಳೆಯುವಾಗ ಕಾಲು ಜಾರಿ ಬಿದ್ದ ಬಾಲಕಿ ರಕ್ಷಣೆಗೆ ಮುಂದಾಗಿ ನಾಲ್ವರು ಮಕ್ಕಳು ನೀರುಪಾಲಾದ ದಾರುಣ ಘಟನೆ ಮಂಡ್ಯ ಜಿಲ್ಲೆಯಲ್ಲಿ ನಡೆದಿದೆ. ಇಬ್ಬರು ಬಾಲಕಿಯರ ಮೃತದೇಹ ಪತ್ತೆಯಾಗಿದ್ದು, ಇನ್ನಿಬ್ಬರಿಗಾಗಿ ಹುಡುಕಾಟ ಮುಂದುವರಿದಿದೆ.

ನೀರಿನಲ್ಲಿ ಮುಳುಗಿದ್ದ ಓರ್ವ ಬಾಲಕಿಯನ್ನು ನಿನ್ನೆಯೇ ರಕ್ಷಣೆ ಮಾಡಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೇ ಬಾಲಕಿ ಆಯಿಷಾ (14) ಮೃತಪಟ್ಟಿದ್ದಾಳೆ. ಇಂದು ಆಫ್ರಿನ್ (13) ಮೃತದೇಹ ಪತ್ತೆಯಾಗಿದೆ. ನಾಪತ್ತೆಯಾಗಿರುವ ಹನಿ (14), ಥರ್ಬಿಮ್ (13)ಗಾಗಿ ಹುಡುಕಾಟ ನಡೆದಿದೆ. ಮಕ್ಕಳಿಗಾಗಿ ಅಗ್ನಿಶಾಮಕ ದಳದ ಸಿಬ್ಬಂದಿ ಹುಡುಕಾಟ ನಡೆಸುತ್ತಿದ್ದಾರೆ.

ಮೈಸೂರಿನ ಶಾಂತಿನಗರದ ಮದರಸದಿಂದ ಮಕ್ಕಳು ಪ್ರವಾಸಕ್ಕೆ ಬಂದಿದ್ದರು. 15 ಮಕ್ಕಳು ಹಾಗೂ ಮೂವರು ಸಿಬ್ಬಂದಿ ಪ್ರವಾಸಕ್ಕೆ ಪ್ರವಾಸಕ್ಕೆ ಬಂದಿದ್ದರು. ಶ್ರೀರಂಗಪಟ್ಟಣ ತಾಲೂಕಿನ ಮಂಡ್ಯ ಕೊಪ್ಪಲು ಬಳಿಯ ನಾಲೆಯಲ್ಲಿ ಈ ಅವಘಡ ಸಂಭವಿಸಿದೆ. ನಾಲೆಯಲ್ಲಿ ಇಳಿದು ಆಟವಾಡಲು ಮಕ್ಕಳು ಮುಂದಾಗಿದ್ದರು. ಈ ವೇಳೆ ನೀರಿನ ರಭಸಕ್ಕೆ ಮಕ್ಕಳು ಕೊಚ್ಚಿ ಹೋಗಿದ್ದಾರೆ.

ನಿನ್ನೆ ಸ್ಥಳೀಯರು ಹಾಗೂ ಅಗ್ನಿಶಾಮಕದಳದ ಸಿಬ್ಬಂದಿ ಸಹಾಯದಿಂದ ಓರ್ವ ಬಾಲಕಿ ರಕ್ಷಣೆ ಮಾಡಿ ಮೈಸೂರಿನ ಕೆ.ಆರ್. ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಚಿಕಿತ್ಸೆಗೆ ಸ್ಪಂದಿಸದೇ ಬಾಲಕಿ ಸಾವನಪ್ಪಿದ್ದಳು.

ಮದರಸದ ಬಟ್ಟೆ ತೊಳೆಯಲು ಮಕ್ಕಳನ್ನು ಕರೆದುಕೊಂಡು ಬರಲಾಗಿತ್ತು. ಕಾವೇರಿ ಬೋರೆಯ ನಾಲೆಯ ಬಳಿಗೆ ಕರೆತರಲಾಗಿತ್ತು ಎನ್ನಲಾಗಿದೆ. ಬಟ್ಟೆ ತೊಳೆಯುವ ವೇಳೆ ಬಾಲಕಿ ಕಾಲು ಜಾರಿ ಬಿದ್ದಿದ್ದಾಳೆ. ಈ ವೇಳೆ ಆಕೆಯ ರಕ್ಷಣೆಗೆ ಮುಂದಾದ ಮೂವರು ನೀರಿನಲ್ಲಿ ಕೊಚ್ಚಿ ಹೋಗಿದ್ದರು.

## ಬೆಂಗ್ಳೂರಲ್ಲಿ ಬೀದಿನಾಯಿ ಮೇಲೆ ಗ್ಯಾಂಗ್‌ರೇಪ್



**ಬೆಂಗಳೂರು**: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಬೀದಿನಾಯಿ ಮೇಲೆ ಸಾಮೂಹಿಕ ಅತ್ಯಾಚಾರ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಮಾರು 25 ಸಿಸಿಟಿವಿಯನ್ನು ಪರಿಶೀಲಿಸಿ ಕೊನೆಗೂ ನಾಯಿಯನ್ನು ಪೊಲೀಸರು ಪತ್ತೆ ಮಾಡಿದ್ದಾರೆ.

ಬೆಳ್ಳಂದೂರು ಬಳಿಯ ಸರ್ಜಾಪುರ ರಸ್ತೆಯ ಕೊಡತಿ ಗ್ರಾಮದಲ್ಲಿ ಅಕ್ಟೋಬರ್ 15ರಂದು ಬೀದಿನಾಯಿಗೆ ಆಹಾರ ಹಾಕುವ ಮಹಿಳೆಯೊಬ್ಬರು ಈ ಸಂಬಂಧ ದೂರು ನೀಡಿದ್ದಾರೆ. ಬೀದಿ ನಾಯಿಯ ಮೇಲೆ ನಾಲ್ವರು ಯುವಕರು ಸಾಮೂಹಿಕವಾಗಿ ಅತ್ಯಾಚಾರವೆಸಗಿದ್ದಾರೆ ಅಂತಾ ಪೊಲೀಸರಿಗೆ ದೂರು ನೀಡಿದ್ದರು. ದೂರು ಪಡೆದ ಪೊಲೀಸರು, ಸುಮಾರು 25 ಸಿಸಿಟಿವಿಯನ್ನು ಪರಿಶೀಲನೆ ನಡೆಸಿ ಕೊನೆಗೂ ಆ ನಾಯಿಯನ್ನು ಪತ್ತೆ ಮಾಡಿದ್ದಾರೆ ನಾಯಿಯ ವೆಜೈನಲ್ ಸ್ವಾಬ್ ಸಂಗ್ರಹಿಸಿ ಎಫ್‌ಎಸ್‌ಎಲ್‌ಗೆ ರವಾನೆ ಮಾಡಲಾಗಿದೆ. ಮೊದಲಿಗೆ ಅತ್ಯಾಚಾರ ಆಗಿದೆಯಾ ಇಲ್ವಾ ಅನ್ನೋದರ ಬಗ್ಗೆ ತನಿಖೆ ನಡೆಸಿ ರಿಪೋರ್ಟ್ ಬಂದ ಬಳಿಕ ಆರೋಪಿಗಳ ಪತ್ತೆಗೆ ಮುಂದಾಗಲಿದ್ದಾರೆ. ರಸ್ತೆ ಬದಿ ಮಲಗಿದ್ದ ಬೀದಿ ನಾಯಿಯನ್ನು ಎತ್ತೊಯ್ದು ಅತ್ಯಾಚಾರ ಆರೋಪ ಕೇಳಿಬಂದಿತ್ತು. ಮಹಿಳೆಯೊಬ್ಬರು ವರ್ತೂರು ಠಾಣೆಗೆ ದೂರು ನೀಡಿದ್ದರು. ವ್ಯಾಪ್ತಿ ಪರಿಶೀಲನೆ ನಡೆಸಿ ಬೆಳ್ಳಂದೂರು ಪೊಲೀಸರಿಗೆ ಪ್ರಕರಣ ವರ್ಗಾವಣೆ ಬೆಳ್ಳಂದೂರು ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

## ಕಾರು-ಆಟೋ ನಡುವೆ ಭೀಕರ ಅಪಘಾತ: ನಾಲ್ಕೂವರೆ ವರ್ಷದ ಕಂದಮ್ಮ ದಾರುಣ ಸಾವು



**ಮಂಗಳೂರು**: ಆಟೋಗೆ ಕಾರು ಡಿಕ್ಕಿಯಾದ ಪರಿಣಾಮ ನಾಲ್ಕೂವರೆ ವರ್ಷದ ಮಗು ದಾರುಣವಾಗಿ ಮೃತಪಟ್ಟಿರುವ ಘಟನೆ ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರು ತಾಲೂಕಿನ ಪರ್ಪುಂಜ ಕೊಯಿಲತ್ತಡ್ಕದಲ್ಲಿ ನಡೆದಿದೆ. ಘಟನೆಯಲ್ಲಿ ಆಟೋ ಚಾಲಕ ಸೇರಿ ಐವರು ಗಾಯಗೊಂಡಿದ್ದು, ಬಸ್ ಓವರ್‌ಟೇಕ್ ಮಾಡಲು ಹೋಗಿ ಆಟೋಗೆ ಕಾರು ಡಿಕ್ಕಿಯಾಗಿದೆ.

ಸುಳ್ಯ ಕಡೆಯಿಂದ ಪುತ್ತೂರಿನತ್ತ ತೆರಳುತ್ತಿದ್ದ ಕಾರು ಚಾಲಕ ಬಸ್‌ನ ಓವರ್‌ಟೇಕ್ ಮಾಡಲು ಯತ್ನಿಸಿದ್ದಾನೆ. ಈ ವೇಳೆ ನಿಯಂತ್ರಣ ಕಳೆದುಕೊಂಡ ಕಾರು ಪುತ್ತೂರಿನಿಂದ ತಿಂಗಳಾಡಿ ಕಡೆಗೆ ತೆರಳುತ್ತಿದ್ದ ಆಟೋಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಆಟೋ ಚಾಲಕ ಹನೀಫ್ ಬನ್ನೂರು ಅವರ ಮಗಳು ಶಜ್ವಾ ಫಾತಿಮಾ ಸಾವನ್ನಪ್ಪಿದ್ದಾಳೆ. ಹನೀಫ್, ಪತ್ನಿ, ಇಬ್ಬರು ಮಕ್ಕಳು ಮತ್ತು ಅತ್ತೆಗೆ ಗಾಯವಾಗಿದ್ದು, ಈ ಪೈಕಿ ಇಬ್ಬರನ್ನು ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿಗೆ ರವಾನಿಸಲಾಗಿದೆ. ಘಟನೆ ಸಂಬಂಧ ಪುತ್ತೂರು ಗ್ರಾಮಾಂತರ ಪೊಲೀರು ಪ್ರಕರಣ ದಾಖಲಿಸಿಕೊಂಡಿದ್ದಾರೆ

### ರಸ್ತೆಬದಿ ನವಜಾತ ಶಿಶುವಿನ ಶವ ಪತ್ತೆ


ಹೊಸಕೋಟೆ ನಗರದ ದೊಡ್ಡಕೆರೆ ಏರಿ ಬಳಿಯ ರಸ್ತೆಬದಿ ನವಜಾತ ಶಿಶುವಿನ ಶವ ಪತ್ತೆಯಾಗಿದೆ. ಹೆಣ್ಣು ಮಗು ಎಂಬ ಕಾರಣಕ್ಕೆ ರಸ್ತೆ ಬದಿ ಬಿಸಾಕಿ ಹೋಗಿರುವ ಶಂಕೆ ವ್ಯಕ್ತವಾಗಿದ್ದು, ಮೃತಪಟ್ಟ ನವಜಾತ ಶಿಶುವಿನ ಶವವನ್ನು ಆಸ್ಪತ್ರೆಯ ಶವಾಗಾರಕ್ಕೆ ಶಿಫ್ಟ್ ಮಾಡಲಾಗಿದೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಹೊಸಕೋಟೆ ಪೊಲೀಸರು, ತನಿಖೆ ನಡೆಸುತ್ತಿದ್ದಾರೆ.

### ಪುತ್ರನ ಸಾವಿನ ನಡುವೆಯೂ ತಾಯಿಯ ಸಾರ್ಥಕತೆ

ಪುತ್ರನ ಸಾವಿನ ನಡುವೆಯೂ ದಾವಣಗೆರೆಯಲ್ಲಿ ತಾಯಿಯೊಬ್ಬರು ಸಾರ್ಥಕತೆ ಮೆರೆದಿದ್ದಾರೆ. ಬೈಕ್ ಅಪಘಾತದಲ್ಲಿ ಅ. 24ರಂದು ತೀವ್ರ ಗಾಯಗೊಂಡಿದ್ದ ನ್ಯಾಮತಿ ಪಟ್ಟಣದ ಅಂಬೇಡ್ಕರ್ ನಗರದ ನಿವಾಸಿ ಎನ್. ಕಿರಣ್ (24) ಮೆದುಳು ನಿಷ್ಕ್ರಿಯಗೊಂಡು ನಿಧನ ಹೊಂದಿದ್ದರು.

ಮಗನ ಹೃದಯ, ಕಿಡ್ನಿ, ಲೀವರ್‌ನ ತಾಯಿ ಉಮಾ ಬೆಂಗಳೂರು ಹೆಚ್‌ಎಎಲ್ ರಸ್ತೆಯಲ್ಲಿರುವ ಮಣಿಪಾಲ್ ಆಸ್ಪತ್ರೆಗೆ ದಾನ ಮಾಡಿದ್ದಾರೆ. ಬಳಿಕ ನಿನ್ನೆ ಸಂಜೆ ನ್ಯಾಮತಿ ಪಟ್ಟಣದ ರುದ್ರಭೂಮಿಯಲ್ಲಿ ಕಿರಣ್ ಅಂತ್ಯ ಸಂಸ್ಕಾರ ನಡೆಸಲಾಗಿದೆ.

## ಮೇವು ತರಲು ಹೊಲಕ್ಕೆ ಹೋದ ತಾಯಿ – ಮಗು ಹೊಂಡದಲ್ಲಿ ಶವವಾಗಿ ಪತ್ತೆ



**ಕೋಲಾರ**: ಮೇವು ತರಲು ಹೊಲಕ್ಕೆ ಹೋಗಿದ್ದ ತಾಯಿ-ಮಗು ಹೊಂಡದಲ್ಲಿ ಶವವಾಗಿ ಪತ್ತೆಯಾಗಿರುವ ಘಟನೆ ಕೋಲಾರ ತಾಲೂಕು ಹೊಗರಿಗೊಲ್ಲಹಳ್ಳಿ ಗ್ರಾಮದಲ್ಲಿ ನಡೆದಿದೆ.

ಹೊಗರಿಗೊಲ್ಲಹಳ್ಳಿ ಗ್ರಾಮದ ಗಾರೆ ಕೆಲಸ ಮಾಡುವ ಮಂಜುನಾಥ್ ಎಂಬುವರ ಪತ್ನಿ ಮಾಲಾ (35), ಚಕ್ರವರ್ತಿ (5) ಮೃತ ದುರ್ದೈವಿಗಳು. ಮಾಲಾ ಎಂದಿನಂತೆ ತನ್ನ ಮಗ ಚಕ್ರವರ್ತಿ ಅಂಗನವಾಡಿ ಶಾಲೆ ಅವಧಿ ಮುಗಿದ ಮೇಲೆ ಆತನನ್ನು ಕರೆದುಕೊಂಡು ಹೊಲಕ್ಕೆ ಹೋಗಿ ಹಸುಗಳಿಗೆ ಮೇವು ತಂದು ಹಾಕೋದು ಹೊಲದಲ್ಲಿ ಕೆಲಸ ಮಾಡೋದು ಮಾಡುತ್ತಿದ್ದರು. ಅದರಂತೆ ಶನಿವಾರವೂ ಕೂಡಾ ಅಂಗನವಾಡಿ ಮುಗಿದ ಮೇಲೆ ಮಗನನ್ನು ಕರೆದುಕೊಂಡು ಹೊಲಕ್ಕೆ ಹೋಗಿದ್ದಾರೆ.

ಹೊಲಕ್ಕೆ ಹೋದವರು ರಾತ್ರಿಯಾದರೂ ವಾಪಸ್ ಬಂದಿಲ್ಲ. ಕುಟುಂಬಸ್ಥರು ಅವರಿಗಾಗಿ ರಾತ್ರಿಯೆಲ್ಲಾ ಹುಡುಕಾಡಿದ್ದಾರೆ. ಆದರೆ ಇಬ್ಬರು ಪತ್ತೆಯಾಗಿಲ್ಲ. ಇನ್ನು ಬೆಳಿಗ್ಗೆ ಎದ್ದು ಹೊಲದ ಬಳಿ ನೋಡಿದ್ರೆ ಮಾಲಾ ಹಾಗೂ ಮಗು ಇಬ್ಬರೂ ಹೊಲದಲ್ಲಿದ್ದ ಕೃಷಿಹೊಂಡದಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಇನ್ನೂ ಮಾಲಾ ಹಾಗೂ ಮಂಜುನಾಥ್ ಅವರಿಗೆ ಮದುವೆಯಾಗಿ ಏಳು ವರ್ಷ ಕಳೆದಿದ್ದು, ಇಬ್ಬರಿಗೂ ಚಕ್ರವರ್ತಿ ಅನ್ನೋ ಒಂದು ಗಂಡು ಮಗುವಿದೆ.

ಬೆಳಿಗ್ಗೆ ಎದ್ದು ಗಾರೆ ಕೆಲಸಕ್ಕೆ ಮಂಜುನಾಥ್ ಹೋದರೆ ಮಾಲಾ ಮಗನನ್ನು ನೋಡಿಕೊಂಡು ಹೊಲಕ್ಕೆ ಹೋಗಿ ಅಲ್ಲಿ ಹಸುಗಳಿಗೆ ಮೇವು ತರೋದು ಮಾಡುತ್ತಿದ್ದರು. ಅದರಂತೆ ನಿನ್ನೆಯೂ ಕೂಡಾ ಹೊಲಕ್ಕೆ ಹೋದವರು ರಾತ್ರಿ ಇಡೀ ನಾಪತ್ತೆಯಾಗಿ ಬೆಳಿಗ್ಗೆ ಹೊತ್ತಿಗೆ ಕೃಷಿ ಹೊಂಡದಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಮಗು ಚಕ್ರವರ್ತಿ ನೀರಿಗೆ ಬಿದಿದ್ದು ಆತನನ್ನು ರಕ್ಷಣೆ ಮಾಡಲು ಹೋಗಿ ತಾಯಿ ಮಾಲಾ ಕೂಡಾ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗುತ್ತಿದೆ. ಸದ್ಯ ಘಟನೆ ಸಂಬಂಧ ಕೋಲಾರ ಗ್ರಾಮಾಂತರ ಠಾಣಾ ಪೊಲೀಸರು ಸ್ಥಳಕ್ಕೆ ಬೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಕುಟುಂಬದಲ್ಲಾಗಲಿ, ಗಂಡ ಹೆಂಡತಿಯ ನಡುವೆಯಾಗಲೀ ಯಾವುದೇ ವೈಮನಸ್ಸು ಇರಲಿಲ್ಲ ಎನ್ನಲಾಗಿದೆ.

ಇದೊಂದು ಆಕಸ್ಮಿಕ ಘಟನೆ ಎನ್ನಲಾಗಿದೆ. ಆದರೂ ಕೋಲಾರ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದು, ಘಟನೆ ಸಂಬಂಧ ತನಿಖೆ ಕೈಗೊಂಡಿದ್ದಾರೆ. ಇದೊಂದು ಆಕಸ್ಮಿಕ ಘಟನೆ ಅನ್ನೋದು ಕುಟುಂಬಸ್ಥರ ಮಾತು. ಇನ್ನು ತಾಯಿ ಮತ್ತು ಸಾವಿನಿಂದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ನೆಮ್ಮದಿಯಾಗಿದ್ದ ಸಂಸಾರದಲ್ಲಿ ಬಿರುಗಾಳಿ ಬಂದಂತಾಗಿದೆ.

## ಶಾಲೆಯ 4ನೇ ಮಹಡಿಯಿಂದ ಹಾರಿ 9ರ ಬಾಲಕಿ ಸಾವು



**ಜೈಪುರ**: ಶಾಲೆಯ 4ನೇ ಮಹಡಿಯಿಂದ ಬಿದ್ದು 9ರ ಬಾಲಕಿ ಸಾವನ್ನಪ್ಪಿರುವ ಘಟನೆ ಜೈಪುರದ ಖಾಸಗಿ ಶಾಲೆಯೊಂದರಲ್ಲಿ ನಡೆದಿದೆ ಮೃತ ಬಾಲಕಿಯನ್ನು ಅಮೈರಾ ಎಂದು ಗುರುತಿಸಲಾಗಿದ್ದು, ಅದೇ ಶಾಲೆಯಲ್ಲಿ 4ನೇ ತರಗತಿಯಲ್ಲಿ ಓದುತ್ತಿದ್ದಳು ಎಂದು ತಿಳಿದುಬಂದಿದೆ

ಪೊಲೀಸರ ಮಾಹಿತಿ ಪ್ರಕಾರ, ಬಾಲಕಿ 4ನೇ ಮಹಡಿಯ ಗ್ರಿಲ್ ಹತ್ತಿ, ಕೆಳಗೆ ಹಾರಿರುವ ದೃಶ್ಯ ಶಾಲೆಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಸುಮಾರು 47 ಅಡಿ ಎತ್ತರದಿಂದ ಕೆಳಗೆ ಜಿಗಿದಿದ್ದಾಳೆ. ಕೆಳಗೆ ಬಿದ್ದ ಕೂಡಲೇ ಬಾಲಕಿಯನ್ನು ಆಸ್ಪತ್ರೆಗೆ ರವಾನಿಸಿದರೂ ಕೂಡ ಸಾವನ್ನಪ್ಪಿರುವುದಾಗಿ ವೈದ್ಯರು ತಿಳಿಸಿದರು. ಪ್ರಾಥಮಿಕ ಮಾಹಿತಿ ಪ್ರಕಾರ, ಇದನ್ನು ಆತ್ಮಹತ್ಯೆ ಎನ್ನಲಾಗಿದ್ದು, ಆದರೆ ನಿಖರ ಕಾರಣ ತಿಳಿದುಬರಬೇಕಿದೆ. ಮಾಹಿತಿ ತಿಳಿದ ಕೂಡಲೇ ಘಟನಾ ಸ್ಥಳಕ್ಕೆ ಭೇಟಿ ನೀಡಿದಾಗ, ಬಾಲಕಿ ಬಿದ್ದ ಸ್ಥಳವನ್ನು ಸ್ವಚ್ಛಗೊಳಿಸಲಾಗಿತ್ತು. ಯಾವುದೇ ರಕ್ತದ ಕಲೆ ಉಳಿಯದಂತೆ ಶುಚಿಗೊಳಿಸಿದ್ದರು ಎಂದು ತಿಳಿಸಿದ್ದಾರೆ.

ಇನ್ನೂ ಘಟನೆಗೆ ಸಂಬಂಧಿಸಿದಂತೆ ಬಾಲಕಿಯ ಪೋಷಕರು ಶಾಲಾ ಆಡಳಿತ ಮಂಡಳಿಯ ವಿರುದ್ಧ ದೂರು ದಾಖಲಿಸಿದ್ದಾರೆ. ದೂರಿನನ್ವಯ ಎಫ್‌ಐಆರ್ ದಾಖಲಾಗಿದೆ. ಶಾಲಾ ಆವರಣದಲ್ಲಿ ಈ ರೀತಿಯ ಘಟನೆ ನಡೆಯಲು ಹೇಗೆ ಸಾಧ್ಯ? ಸಿಬ್ಬಂದಿ ಹಾಗೂ ಶಿಕ್ಷಕರನ್ನು ತನಿಖೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿ, ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಸದ್ಯ ಘಟನೆಯ ಬಗ್ಗೆ ಶಾಲಾ ಆಡಳಿತ ಮಂಡಳಿ ಮೌನವಹಿಸಿದೆ.

ಮೃತ ಬಾಲಕಿಯ ತಂದೆ ಖಾಸಗಿ ಕಂಪನಿಯಲ್ಲಿ ಉದ್ಯೋಗಿಯಾಗಿದ್ದು, ತಾಯಿ ಬ್ಯಾಂಕಿನಲ್ಲಿ ಕೆಲಸ ಮಾಡುತ್ತಿದ್ದರು. ಮೃತ ಅಮೈರಾ ಪೋಷಕರ ಒಬ್ಬಳೇ ಮಗಳಾಗಿದ್ದಳು ಎಂದು ತಿಳಿದುಬಂದಿದೆ.

## ತಂಗಿಯನ್ನ ಚುಡಾಯಿಸಿದ್ದಕ್ಕೆ ರಾಜ್ಯೋತ್ಸವ ಮೆರವಣಿಗೆಯಲ್ಲಿ ಚಾಕು



**ಬೆಳಗಾವಿ**: ಗಡಿ ಜಿಲ್ಲೆ ಬೆಳಗಾವಿಯಲ್ಲಿ ಕನ್ನಡ ರಾಜ್ಯೋತ್ಸವ ಮೆರವಣಿಗೆ ವೇಳೆ ಚಾಕು ಇರಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾರ್ಕೆಟ್ ಪೊಲೀಸರು ಇಬ್ಬರು ಆರೋಪಿಗಳನ್ನ ಬಂಧಿಸಿದ್ದಾರೆ ಸೋದರರಾದ ಅರುಣ್ ಕುರುಬರ ಮತ್ತು ಕಿರಣ್ ಕುರುಬರ ಬಂಧಿತರು. ಆರೋಪಿಗಳ ತಂಗಿಯನ್ನ ಚುಡಾಯಿಸಿದ್ದಕ್ಕೆ ಹತ್ಯೆಗೆ ಯತ್ನಿಸಲಾಗಿದೆ. ಸುಳಿವು ಸಿಗುತ್ತಿದ್ದಂತೆ ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ.

ಬೆಳಗಾವಿಯಲ್ಲಿ ಮೊದಲಿನಿಂದಲೂ ಎಂಇಎಸ್ ಪುಂಡರ ಅಟ್ಟಹಾಸ ಹೆಚ್ಚಿದೆ. ಮರಾಠಿಗರಿಗೆ ಪಾಠ ಕಲಿಸಲೆಂದೇ ಈ ಬಾರಿ ಅದ್ದೂರಿ ರಾಜ್ಯೋತ್ಸವ ನಡೆದಿತ್ತು. ಶನಿವಾರ ಬೆಳಗಿನಿಂದ ರಾತ್ರಿವರೆಗೂ ಮೆರವಣಿಗೆ ನಡೆದಿತ್ತು. ಈ ಮೆರವಣಿಗೆ ವೇಳೆ ಕಿಡಿಗೇಡಿಗಳು ನಗರದ ಐವರಿಗೆ ಚಾಕುವಿನಿಂದ ಇರಿದಿದ್ದಾರೆ.

ಇನ್ನು ಶನಿವಾರ ಮೆರವಣಿಗೆಯಲ್ಲಿ ಭಾಗಿಯಾಗಿದ್ದ ಕೆಕೆ ಕೊಪ್ಪ ಗ್ರಾಮದ ಆದಿತ್ಯ ಬೆಂಡಿಗೇರಿಗೂ ಬೆಳಗಾವಿ ಡಿಸಿ ಕಚೇರಿ ಎದುರು ದುರುಳರು ಚಾಕು ಇರಿದಿದ್ದಾರೆ. ಬಂಧಿತ ಸಹೋದರರ ತಂಗಿಯನ್ನು ಆದಿತ್ಯ ಚುಡಾಯಿಸಿದ್ದನಂತೆ. ಇದೇ ಕಾರಣಕ್ಕೆ ಬೆಳಗಾವಿಗೆ ಬಂದು ಆದಿತ್ಯನನ್ನ ಹೊಡೆದರೇ ಗೊತ್ತಾಗುವುದಿಲ್ಲ ಅಂತಾ ಹಲ್ಲೆ ಮಾಡಿ ಪರಾರಿಯಾಗಿದ್ದರು. ಆದರೆ ಇದೀಗ ಜೈಲು ಪಾಲಾಗಿದ್ದಾರೆ. ಅತ್ತ ಆದಿತ್ಯಗೆ ಬಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಬೆಳಗಾವಿಯಲ್ಲಿ ನಿನ್ನೆ ನಡೆದ ರಾಜ್ಯೋತ್ಸವದಲ್ಲಿ ಸುಮಾರು ಮೂರರಿಂದ ನಾಲ್ಕು ಲಕ್ಷ ಜನ ಭಾಗಿಯಾಗಿದ್ದರ ಬಗ್ಗೆ ಮಾಹಿತಿ ಇದೆ. ಇಂತಹ ಸಂದರ್ಭದಲ್ಲಿ ಕೆಲ ಕಿಡಗೇಡಿಗಳು ಹಳೆ ದ್ವೇಷ ಇಟ್ಟುಕೊಂಡು ಚಾಕು ಇರಿದು ಅಟ್ಟಹಾಸ ಮೆರೆದಿದ್ದಾರೆ. ಇನ್ನೊಂದು ಕಡೆ ಖದೀಮರು ಗ್ಯಾಂಗ್ ಕಟ್ಟಿಕೊಂಡು ಬಂದು 300ಕ್ಕೂ ಅಧಿಕ ಜನರ ಮೊಬೈಲ್ ಕದ್ದು ಕೈ ಚಳಕ ತೋರಿಸಿದ್ದಾರೆ. ಒಟ್ಟಿನಲ್ಲಿ ಮೊಬೈಲ್ ಹಾಗೂ ಚಾಕು ಇರಿತ ಪ್ರಕರಣ ಪೊಲೀಸರಿಗೆ ಸದ್ಯ ತಲೆನೋವಾಗಿ ಮಾರ್ಪಟ್ಟಿವೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಕನ್ನಡ ಹೋರಾಟಗಾರರ ಮೇಲಿನ ಕೇಸುಗಳನ್ನು ವಾಪಾಸ್ ತಗೊತೀವಿ: ಸಿಎಂ ಸಿದ್ದರಾಮಯ್ಯ ಘೋಷಣೆ



**ಬೆಂಗಳೂರು**: ವಾಟಾಳ್ ಕನ್ನಡದ ವಿಚಾರದಲ್ಲಿ ರಾಜಿ ಮಾಡಿಕೊಳ್ಳದ ಹೋರಾಟಗಾರರು. ದೇವರಾಜ ಅರಸು ಅವರು ಮಂತ್ರಿ ಸ್ಥಾನ ಕೊಡ್ತೀನಿ ಎಂದು ಕರೆದರೂ ಕನ್ನಡ ಪಕ್ಷ ಮತ್ತು ಕನ್ನಡ ಹೋರಾಟ ಬಿಡಲು ವಾಟಾಳ್ ಅವರು ಒಪ್ಪಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ನಾವೆಲ್ಲರೂ ಕನ್ನಡ ನೆಲ, ಜಲ, ಭಾಷೆ, ಸಂಸ್ಕೃತಿ ಬಗ್ಗೆ ಅಭಿಮಾನ, ಪ್ರೀತಿ ಬೆಳೆಸಿಕೊಳ್ಳಬೇಕು. ನಮ್ಮ ನೆಲದಲ್ಲಿ ಕನ್ನಡದ ವಾತಾವರಣ ಬೆಳೆಸಬೇಕು. ಇದಕ್ಕಾಗಿ ಯಾರು ಯಾವುದೇ ಭಾಷೆಯಲ್ಲಿ ಮಾತನಾಡಿದರೂ ನೀವು ಕನ್ನಡದಲ್ಲೇ ಉತ್ತರ ಕೊಡಬೇಕು ಎಂದು ಕರೆ ನೀಡಿದರು.

ಕನ್ನಡ ನೆಲದಲ್ಲಿ ಬದುಕು ಕಟ್ಟಿಕೊಂಡ ಪ್ರತಿಯೊಬ್ಬರೂ ಕನ್ನಡದ ವಾತಾವರಣವನ್ನು ಗೌರವಿಸುತ್ತಾರೆ. ಕನ್ನಡ ನೆಲದಲ್ಲಿ ನಾವು ಕನ್ನಡದಲ್ಲೇ ಮಾತಾಡುತ್ತೇವೆ ಎನ್ನುವ ಶಪಥ ಮಾಡೋಣ ಎಂದು ಕರೆ ನೀಡಿದರು. ನಮ್ಮ ಭೂಮಿ, ನಮ್ಮ ನೆಲ, ನಮ್ಮ ಜಲ, ನಮ್ಮ ಭಾಷೆ ಎನ್ನುವ ಅಭಿಮಾನ ಮೂಡಲಿ ಎಂದು ಕರೆ ನೀಡಿದರು.

ಮೈಸೂರು ವಿಶ್ವ ವಿದ್ಯಾಲಯದಿಂದ ದೇವರಾಜು ಅರಸು ಅವರಿಗೆ ಮರಣೋತ್ತರ ಡಾಕ್ಟರೇಟ್ ಪ್ರಶಸ್ತಿ ನೀಡಬೇಕು ಎನ್ನುವ ವಾಟಾಳ್ ನಾಗರಾಜ್ ಮತ್ತು ಸಾ.ರಾ ಗೋವಿಂದು ಅವರ ಬೇಡಿಕೆಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಈ ಬಗ್ಗೆ ಸಿಂಡಿಕೇಟ್ ಸದಸ್ಯರ ಜೊತೆ ಚರ್ಚಿಸುವುದಾಗಿ ಭರವಸೆ ನೀಡಿದರು. ಇಲ್ಲಿಯವರೆಗೂ ಅರಸು ಅವರಿಗೆ ಡಾಕ್ಟರೇಟ್ ಏಕೆ ಕೊಟ್ಟಿಲ್ಲ ಎಂದು ಶಾಕ್ ಆಗಿದೆ. ಈ ಬಗ್ಗೆ ಗಮನ ಹರಿಸ್ತೀನಿ ಎಂದರು.

ಮೈಸೂರು ವಿವಿಯಲ್ಲಿ ನನಗೆ ಹಿಂದೆಯೇ ಡಾಕ್ಟರೇಟ್ ಕೊಡ್ತೀವಿ ಎಂದಿದ್ದರು. ಆದರೆ ನಾನು ಪಡೆಯಲಿಲ್ಲ. ಬೇಡ ಅಂದೆ. ಓದಿ, ಜ್ಞಾನ ವಿಸ್ತಾರ ಮಾಡಿಕೊಂಡು ಡಾಕ್ಟರೇಟ್ ಪಡೆಯಬೇಕು ಎನ್ನುವುದು ನನ್ನ ವೈಯುಕ್ತಿಕ ಭಾವನೆ ಎಂದರು.

ನಾನು ವೈಯುಕ್ತಿಕವಾಗಿ ದ್ವಿಭಾಷಾ ಪರವಾಗಿ ಇದ್ದೇನೆ. ಆದರೆ ದ್ವಿಭಾಷಾ ನೀತಿಯಾಗಿ ಕಾನೂನು ಜಾರಿ ಆಗಬೇಕಾದರೆ ಕ್ಯಾಬಿನೆಟ್ ನಲ್ಲಿ ಚರ್ಚಿಸಬೇಕಾಗುತ್ತದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

MES ನವರೂ ಕನ್ನಡಿಗರೇ. ಅವರಲ್ಲಿ ಯಾರಾದರೂ ಪುಂಡಾಟಿಕೆ ಮಾಡಿದರೆ ಅದನ್ನು ಮಟ್ಟಹಾಕ್ತೀವಿ. ಗಡಿ ಭಾಗದ ಕನ್ನಡ ಶಾಲೆಗಳ ಅಭಿವೃದ್ಧಿಗೆ ಅಗತ್ಯ ಇರುವುದನ್ನೆಲ್ಲಾ ಮಾಡಲು ಸರ್ಕಾರ ಸಿದ್ಧವಿದೆ ಎಂದರು.

## ಬಾಂಬ್ ಬೆದರಿಕೆ: ಹೈದರಾಬಾದ್‌ಗೆ ತೆರಳಬೇಕಿದ್ದ ಇಂಡಿಗೋ ವಿಮಾನ ಮುಂಬೈನಲ್ಲಿ ಸುರಕ್ಷಿತ ಲ್ಯಾಂಡಿಂಗ್



**ಮುಂಬೈ**: ಸೌದಿ ಅರೇಬಿಯಾದ ಜೆಡ್ಡಾದಿಂದ ಹೈದರಾಬಾದ್‌ಗೆ ಹಾರುತ್ತಿದ್ದ ಇಂಡಿಗೋ ವಿಮಾನದಲ್ಲಿ (Flight 6E 68) ಬಾಂಬ್ ಬೆದರಿಕೆ ವರದಿಯಾದ ಹಿನ್ನೆಲೆಯಲ್ಲಿ ಶನಿವಾರ ಮುಂಜಾನೆ ಮುಂಬೈ ವಿಮಾನ ನಿಲ್ದಾಣದಲ್ಲಿ ತುರ್ತು ಪರಿಸ್ಥಿತಿ ಘೋಷಿಸಲಾಯಿತು. 185 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಏರ್‌ಬಸ್ A320neo ವಿಮಾನವನ್ನು ಮುಂಜಾನೆ 7:30ರ ಸುಮಾರಿಗೆ ಮುಂಬೈಗೆ ತಿರುಗಿಸಲಾಯಿತು.

ವಾಯು ಸಂಚಾರ ನಿಯಂತ್ರಣ ಕೇಂದ್ರ (ATC)ಗೆ ಬೆಳಿಗ್ಗೆ ಸುಮಾರು 7:30ರ ಸುಮಾರಿಗೆ ಬಾಂಬ್ ಬೆದರಿಕೆಯ ಎಚ್ಚರಿಕೆ ಬಂದಿದ್ದು, ತಕ್ಷಣವೇ ಪೂರ್ಣ ಪ್ರಮಾಣದ ತುರ್ತು ಪರಿಸ್ಥಿತಿ ಘೋಷಿಸಲಾಯಿತು. ಏರ್‌ಬಸ್ A320neo ಮಾದರಿಯ ಈ ವಿಮಾನವನ್ನು ಮುಂಬೈ ವಿಮಾನ ನಿಲ್ದಾಣಕ್ಕೆ ತಿರುಗಿಸುವ ನಿರ್ಧಾರ ಕೈಗೊಳ್ಳಲಾಯಿತು. ಅಧಿಕಾರಿಗಳು ತಮ್ಮ ತುರ್ತು ಪ್ರೋಟೋಕಾಲ್‌ಗಳನ್ನು ಸಕ್ರಿಯಗೊಳಿಸಿ, ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ (CISF), ಬಾಂಬ್ ಡಿಟೆಕ್ಷನ್ ಅಂಡ್ ಡಿಸ್ಪೋಸಲ್ ಸ್ಕ್ವಾಡ್ (BDDS), ಅಗ್ನಿಶಾಮಕ ದಳ ಮತ್ತು ವೈದ್ಯಕೀಯ ತಂಡಗಳನ್ನು ಸಜ್ಜುಗೊಳಿಸಿದರು. ಎಲ್ಲಾ ಸಂಬಂಧಿತ ಸಂಸ್ಥೆಗಳಿಗೆ ಮಾಹಿತಿ ನೀಡಿ, ಸಂಪೂರ್ಣ ಸಿದ್ಧತೆಯೊಂದಿಗೆ ಕಾಯುವಂತೆ ಸೂಚಿಸಲಾಯಿತು.


ಬೆಳಿಗ್ಗೆ 7:32ಕ್ಕೆ ವಿಮಾನದ ಪೈಲಟ್ ತುರ್ತು ಸಂದೇಶ ಕಳುಹಿಸಿ, ಬಾಂಬ್ ಬೆದರಿಕೆ ಇದೆ ಎಂದು ದೃಢಪಡಿಸಿದರು. ಮುಂಬೈ ATC ಇದನ್ನು ಖಚಿತಪಡಿಸಿ, ತುರ್ತು ಕಾರ್ಯಾಚರಣೆಯನ್ನು ವೇಗಗೊಳಿಸಿತು. ಮುಖ್ಯ ಅಗ್ನಿಶಾಮಕ ಕೇಂದ್ರಗಳಾದ CFT-5, CFT-8 ಮತ್ತು CFT-9ಗಳಿಂದ ಅಗ್ನಿಶಾಮಕ ವಾಹನಗಳನ್ನು ನಿಯೋಜಿಸಲಾಯಿತು. ಉಪಗ್ರಹ ಕೇಂದ್ರಗಳಿಂದಲೂ ವಾಹನಗಳು ಸಿದ್ಧಗೊಂಡವು. ಕಮಾಂಡ್ ಪೋಸ್ಟ್‌ಗಳನ್ನು ಸ್ಥಾಪಿಸಿ, ಗೇಟ್ ಸಂಖ್ಯೆ 5 ಬಳಿ ಹೆಚ್ಚುವರಿ ಮುಂಬೈ ಅಗ್ನಿಶಾಮಕ ದಳದ ವಾಹನಗಳನ್ನು ನಿಲ್ಲಿಸಲಾಯಿತು. ರನ್‌ವೇ ಸುತ್ತಮುತ್ತಲಿನ ಪ್ರದೇಶವನ್ನು ಸಂಪೂರ್ಣವಾಗಿ ಸೀಲ್ ಮಾಡಿ, ಯಾವುದೇ ಅಪಾಯವನ್ನು ತಪ್ಪಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಯಿತು.

ಅಂತಿಮವಾಗಿ, ಬೆಳಿಗ್ಗೆ 8:24ಕ್ಕೆ ಇಂಡಿಗೋ ವಿಮಾನ 6E 68 ರನ್‌ವೇ 27ರಲ್ಲಿ ಸುರಕ್ಷಿತವಾಗಿ ಇಳಿಯಿತು. ತುರ್ತು ವಾಹನಗಳು ವಿಮಾನವನ್ನು ಅನುಸರಿಸಿ, ತಕ್ಷಣದ ಪ್ರತಿಕ್ರಿಯೆಗೆ ಸಿದ್ಧವಾಗಿದ್ದವು. ಲ್ಯಾಂಡಿಂಗ್ ನಂತರ ವಿಮಾನವನ್ನು ಟ್ಯಾಕ್ಸಿವೇ E9ನಲ್ಲಿರುವ ಐಸೋಲೇಷನ್ ಬೇಗೆ ಮಾರ್ಗದರ್ಶನ ಮಾಡಲಾಯಿತು. ಅಲ್ಲಿ BDDS ತಂಡ, ನಾಯಿ ತಂಡಗಳು ಮತ್ತು ಭದ್ರತಾ ಸಿಬ್ಬಂದಿ ವಿವರವಾದ ತಪಾಸಣೆ ನಡೆಸಿದರು.

ಪ್ರಯಾಣಿಕರನ್ನು ಸುರಕ್ಷಿತವಾಗಿ ಇಳಿಸಿ, ಅವರ ಬ್ಯಾಗೇಜ್ ಮತ್ತು ವಿಮಾನದ ಒಳಭಾಗವನ್ನು ಪರೀಕ್ಷಿಸಲಾಯಿತು. ತಪಾಸಣೆಯ ನಂತರ ಬೆದರಿಕೆಯು ವಿಶ್ವಾಸಾರ್ಹವಲ್ಲ ಎಂದು ದೃಢಪಡಿಸಲಾಯಿತು. ಬೆಳಿಗ್ಗೆ 11:38ಕ್ಕೆ ATC ಅಧಿಕೃತವಾಗಿ ತುರ್ತುಸ್ಥಿತಿಯನ್ನು ಹಿಂತೆಗೆದುಕೊಂಡಿತು. 11:56ರ ಹೊತ್ತಿಗೆ ತುರ್ತು ಸಿಬ್ಬಂದಿ ತಮ್ಮ ಕೇಂದ್ರಗಳಿಗೆ ಮರಳಿದರು. ಆದರೆ ಯಾವುದೇ ಅನಾಹುತ ಸಂಭವಿಸಲಿಲ್ಲ.

ಇಂಡಿಗೋ ವಕ್ತಾರರು ಅಧಿಕೃತ ಹೇಳಿಕೆಯಲ್ಲಿ ತಿಳಿಸಿದಂತೆ, "ಜೆಡ್ಡಾದಿಂದ ಹೈದರಾಬಾದ್‌ಗೆ ಹಾರುತ್ತಿದ್ದ ನಮ್ಮ ವಿಮಾನ 6E 68ಗೆ ಭದ್ರತಾ ಬೆದರಿಕೆ ಬಂದಿದ್ದು, ಸ್ಥಾಪಿತ ಶಿಷ್ಟಾಚಾರಗಳನ್ನು ಅನುಸರಿಸಿ ಮುಂಬೈಗೆ ತಿರುಗಿಸಲಾಯಿತು. ಅಧಿಕಾರಿಗಳೊಂದಿಗೆ ಸಂಪೂರ್ಣ ಸಹಕಾರ ನೀಡಿ, ಅಗತ್ಯ ತಪಾಸಣೆಗಳನ್ನು ಪೂರ್ಣಗೊಳಿಸಿದ್ದೇವೆ. ಪ್ರಯಾಣಿಕರಿಗೆ ಉಪಾಹಾರ, ನೀರು ಮತ್ತು ನಿಯಮಿತ ನವೀಕರಣಗಳನ್ನು ಒದಗಿಸಿ ಅನಾನುಕೂಲತೆ ಕಡಿಮೆ ಮಾಡಲು ಶ್ರಮಿಸಿದ್ದೇವೆ. ಸುರಕ್ಷತೆಯೇ ನಮ್ಮ ಮೊದಲ ಆದ್ಯತೆ" ಎಂದು

## ಶ್ರೀಕಾಕುಳಂ ವೆಂಕಟೇಶ್ವರ ದೇವಸ್ಥಾನದಲ್ಲಿ ಕಾಲ್ತುಳಿತ: ಮೃತರ ಕುಟುಂಬಕ್ಕೆ ಪ್ರಧಾನಿ ಮೋದಿಯಿಂದ 2 ಲಕ್ಷ ರೂ. ಪರಿಹಾರ



**ನವದೆಹಲಿ**: ಶ್ರೀಕಾಕುಳಂ ಜಿಲ್ಲೆಯ ಪ್ರಸಿದ್ಧ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಸಂಭವಿಸಿದ ಭಯಾನಕ ಕಾಲ್ತುಳಿತ ದುರಂತವು ರಾಷ್ಟ್ರವನ್ನೇ ಬೆಚ್ಚಿಬೀಳಿಸಿದೆ. ಈ ದುರಂತದಲ್ಲಿ ಕನಿಷ್ಠ 10 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಹಲವಾರು ಭಕ್ತರು ಗಂಭೀರವಾಗಿ ಗಾಯಗೊಂಡಿದ್ದಾರೆ. ದೇವಾಲಯದಲ್ಲಿ ದರ್ಶನಕ್ಕಾಗಿ ತಳ್ಳಾಟ ನಡೆದ ಸಂದರ್ಭದಲ್ಲಿ ಈ ದುರಂತ ಸಂಭವಿಸಿದೆ ಎಂದು ಪ್ರಾಥಮಿಕ ಮಾಹಿತಿ ತಿಳಿಸುತ್ತದೆ.

ದುರಂತದ ಸುದ್ದಿ ತಿಳಿಯುತ್ತಲೇ ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ತಮ್ಮ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ಪೋಸ್ಟ್ ಮಾಡಿರುವ ಮೋದಿ, "ಶ್ರೀಕಾಕುಳಂ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಡೆದ ಕಾಲ್ತುಳಿತ ದುರಂತದಿಂದ ನಾನು ತೀವ್ರ ದುಃಖಿತನಾಗಿದ್ದೇನೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳೊಂದಿಗೆ ನಮ್ಮ ಹೃದಯಪೂರ್ವಕ ಸಂತಾಪಗಳು. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ" ಎಂದು ಬರೆದುಕೊಂಡಿದ್ದಾರೆ.

ಪ್ರಧಾನಿ ಮೋದಿ ತಕ್ಷಣವೇ ಪರಿಹಾರ ಕ್ರಮಗಳನ್ನು ಘೋಷಿಸಿದ್ದಾರೆ. ಮೃತರ ಕುಟುಂಬಗಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂಪಾಯಿ ನೆರವು ನೀಡಲಾಗುವುದು. ಇದರ ಜೊತೆಗೆ, ಗಾಯಾಳುಗಳಿಗೆ ತಲಾ 50 ಸಾವಿರ ರೂಪಾಯಿ ಪರಿಹಾರ ಘೋಷಿಸಲಾಗಿದೆ. ಆಂಧ್ರಪ್ರದೇಶ ಸರ್ಕಾರವು ಸಹ ಈ ದುರಂತದ ಬಗ್ಗೆ ತನಿಖೆ ನಡೆಸುತ್ತಿದ್ದು, ರಾಜ್ಯ ಮುಖ್ಯಮಂತ್ರಿ ವೈ.ಎಸ್. ಜಗನ್ ಮೋಹನ್ ರೆಡ್ಡಿ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವ ಸಾಧ್ಯತೆಯಿದೆ.

**ಈ ದುರಂತ ಹೇಗೆ ಸಂಭವಿಸಿತು?**


ಶ್ರೀಕಾಕುಳಂನ ವೆಂಕಟೇಶ್ವರ ಸ್ವಾಮಿ ದೇವಸ್ಥಾನವು ಆಂಧ್ರಪ್ರದೇಶದ ಪ್ರಮುಖ ತೀರ್ಥಕ್ಷೇತ್ರಗಳಲ್ಲಿ ಒಂದು. ವಿಶೇಷ ದಿನಗಳಲ್ಲಿ ಸಾವಿರಾರು ಭಕ್ತರು ಇಲ್ಲಿಗೆ ಆಗಮಿಸುತ್ತಾರೆ. ಘಟನೆಯ ದಿನವೂ ದರ್ಶನಕ್ಕಾಗಿ ಬೃಹತ್ ಜನಸಮೂಹ ಸೇರಿತ್ತು. ದೇವಾಲಯದ ಸಂಕೀರ್ಣ ಪ್ರವೇಶ ದ್ವಾರದ ಬಳಿ ತಳ್ಳಾಟ ಉಂಟಾಗಿ, ಜನರು ಒಬ್ಬರ ಮೇಲೊಬ್ಬರು ಬಿದ್ದು ಕಾಲ್ತುಳಿತಕ್ಕೆ ಕಾರಣವಾಯಿತು. ಪ್ರಾಥಮಿಕ ವರದಿಗಳ ಪ್ರಕಾರ, ದೇವಾಲಯದ ಸಿಬ್ಬಂದಿ ಸಂಖ್ಯೆ ಕಡಿಮೆಯಿದ್ದುದು ಮತ್ತು ಭದ್ರತಾ ವ್ಯವಸ್ಥೆಯಲ್ಲಿ ಲೋಪವಿದ್ದುದು ಈ ದುರಂತಕ್ಕೆ ಮುಖ್ಯ ಕಾರಣ ಎಂದು ತಿಳಿದುಬಂದಿದೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗಳಿಗೆ ರವಾನಿಸಲಾಗಿದ್ದು, ಅವರಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ.

## 2ನೇ ಬಾರಿಗೆ ಚಿಕ್ಲಿಹೊಳೆ ಜಲಾಶಯ ಭರ್ತಿ – ಮತ್ತೆ ಹೆಚ್ಚಿದ ಪ್ರವಾಸಿಗರ ದಂಡು



**ಮಡಿಕೇರಿ**: ಕಾವೇರಿ ನೀರಾವರಿ ನಿಗಮದ ನಿರ್ಲಕ್ಷ್ಯಕ್ಕೆ ತುತ್ತಾಗಿರುವ ಕುಶಾಲನಗರ ತಾಲ್ಲೂಕಿನ ರಂಗಸಮುದ್ರದ ಬಳಿ ಇರುವ ಚಿಕ್ಲಿಹೊಳೆ ಜಲಾಶಯ 2ನೇ ಬಾರಿಗೆ ಭರ್ತಿಯಾಗಿದೆ. ಕಳೆದ ಕೆಲದಿನಗಳಿಂದ ಸುರಿಯುತ್ತಿರುವ ಅಕಾಲಿಕ ಮಳೆಯಿಂದಾಗಿ ಚಿಕ್ಲಿಹೊಳೆ ಜಲಾಶಯ ಮತ್ತೊಮ್ಮೆ ಭರ್ತಿಯಾಗಿದೆ. ಹೀಗಾಗಿ ನೂರಾರು ಪ್ರವಾಸಿಗರು ಲಗ್ಗೆ ಇಡುತ್ತಿದ್ದಾರೆ. ಕೊ 0.18 ಟಿಎಂಸಿ ಕನಿಷ್ಠ ಪ್ರಮಾಣದ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿರುವ ಜಲಾಶಯ ಕಳೆದ ವರ್ಷದ ಇದೇ ಮೇ ಮಾಸಾಂತ್ಯದಲ್ಲಿ ಸಂಪೂರ್ಣ ಖಾಲಿಯಾಗಿ ಒಣಗುವ ಹಂತ ತಲುಪಿತ್ತು. 12 ಗ್ರಾಮಗಳ 2,137 ಹೆಕ್ಟೇರ್ ಭೂಮಿಗೆ ಭತ್ತ ಬೆಳೆಯಲು ಈ ಜಲಾಶಯ ಆಶ್ರಯವಾಗಿದೆ. ಭರ್ತಿಯಾದ ಜಲಾಶಯದಿಂದ ಅರ್ಧಚಂದ್ರಾಕಾರದ ಸುರುಳಿಯಲ್ಲಿ ಹರಿಯುತ್ತಿರುವ ದೃಶ್ಯವನ್ನು ಕಣ್ತುಂಬಿಕೊಳ್ಳಲು ಪ್ರವಾಸಿಗರು ದಾಂಗುಡಿ ಇಡುತ್ತಿದ್ದಾರೆ. ಡಗಿನಲ್ಲಿ ಸುರಿಯುತ್ತಿರುವ ಅಕಾಲಿಕ ಮಳೆಗೆ ಜಿಲ್ಲೆಯ ನಾನಾ ಭಾಗಗಳಲ್ಲಿ ಮಳೆಯಿಂದಾಗಿ ಕಾಫಿ, ಕರಿಮೆಣಸು ಬೆಳೆಗಳಿಗೆ ಸಾಕಷ್ಟು ಹಾನಿಯುಂಟಾಗಿದೆ. ಇದರ ನಡುವೆ ಖುಷಿಯ ವಿಚಾರ ಎನ್ನುವಂತೆ ಕುಶಾಲನಗರ ತಾಲೂಕಿನ ಚಿಕ್ಲಿಹೊಳೆಯ ಜಲಾಶಯ 2ನೇ ಬಾರಿಗೆ ಭರ್ತಿಯಾಗಿದೆ.

## 8 ದಿನದ ಹಿಂದಷ್ಟೇ ಹುಟ್ಟಿದ ಹಸುಗೂಸು, 2 ವರ್ಷದ ಅಂಗವಿಕಲ ಮಗು ಕೊಂದು ಜೀವಬಿಟ್ಟ ತಾಯಿ



**ಮಡಿಕೇರಿ**: ಆಕೆ ತನ್ನ ತವರು ಮನೆಗೆ ಹೆರಿಗೆಗೆಂದು ಬಂದಿದ್ದಳು. 8 ದಿನದ ಹಿಂದೆಯಷ್ಟೇ ಸುಂದರ ಹೆಣ್ಣು ಮಗುವೊಂದು ಜನಿಸಿತ್ತು. ಆದ್ರೆ ಅದೇನಾಗಿತ್ತೋ ಏನೋ ಮನೆಯವರು ಹೊರಗೆ ಕೆಲಸ ಮಾಡುವಾಗ ಇತ್ತ ಎರಡು ಪುಟ್ಟ ಮಕ್ಕಳನ್ನ ಕೊಂದು ತಾನೂ ಆತ್ಮಹತ್ಯೆಗೆ ತಾಯಿ ಶರಣಾಗಿದ್ದಾಳೆ. ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಗ್ರಾಮದಲ್ಲಿ ನಡೆದ ಈ ಹೃದಯವಿದ್ರಾವಕ ಘಟನೆ ಕಟುಕನಿಗೂ ಕರುಳು ಹಿಂಡುವಂತಿದೆ.

ಘಟನೆ ಕಂಡು ಬೆಟ್ಟದಪುರ ಗ್ರಾಮದ ಮುಸ್ಲಿಂ ಬ್ಲಾಕ್ ಸುತ್ತಮುತ್ತಲಿನ ಜನ ಬೆಚ್ಚಿಬಿದ್ದಿದ್ದಾರೆ. ಮತ್ತೊಂದು ಕಡೆ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಘಟನೆ ತಿಳಿದು ಸ್ಥಳಕ್ಕೆ ಬಂದ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಬೆಟ್ಟದಪುರ ಮುಸ್ಲಿಂ ಬ್ಲಾಕ್ ನಿವಾಸಿ ರಬಿಯಾ ಭಾನು (21) ಮಕ್ಕಳನ್ನ ಕೊಂದು ಆತ್ಮಹತ್ಯೆ ಮಾಡಿಕೊಂಡ ಮಹಿಳೆ. ಮೃತಳಿಗೆ 2 ವರ್ಷದ ಅನಮ್ ಫಾತಿಮಾ ಎಂಬ ಹೆಣ್ಣುಮಗಳಿದ್ದಳು. ಮತ್ತೊಂದು ಮಗು 8 ದಿನಗಳ ಹಿಂದಷ್ಟೇ ಜನಿಸಿತ್ತು.

ತವರು ಮನೆಯಲ್ಲಿ ಯಾರೂ ಇಲ್ಲದ ವೇಳೆ ಮಕ್ಕಳ ಕತ್ತು ಕೊಯ್ದು ಕೃತ್ಯ ಎಸಗಿದ್ದಾಳೆ ಪೊಲೀಸ್ ಮೂಲಗಳ ಪ್ರಕಾರ, ರಬಿಯಾ ಭಾನು ಅವರ ಮೊದಲ ಮಗಳು 2 ವರ್ಷದವಳಿದ್ದು, ಅಂಗವಿಕಲೆಯಾಗಿದ್ದಳು. ಕುಟುಂಬದಲ್ಲಿ ಹೆಣ್ಣು ಮಕ್ಕಳು ಹೆಚ್ಚು ಆಗುವುದನ್ನು ಒಪ್ಪಿಕೊಳ್ಳಲು ಸಾಧ್ಯವಾಗದೇ, ತಾಯಿ ಈ ನಿರ್ಧಾರ ತೆಗೆದುಕೊಂಡಿದ್ದಾರೆ ಎಂಬ ಶಂಕೆಯಿದೆ. ಆದ್ರೆ ಇದು ಕೇವಲ ಊಹೆ. ಆಕೆ ಎಂದಿನಂತೆ ಮನೆಯಲ್ಲಿ ಲವಲವಿಕೆಯಿಂದಲೇ ಇದ್ದಳು. ತಂದೆ ಹಾಗೂ ಸಹೋದರ ಕೆಲಸಕ್ಕೆ ತೆರಳಿದ್ದ ಸಂದರ್ಭದಲ್ಲಿ ಮಕ್ಕಳನ್ನ ಹತ್ಯೆ ಮಾಡಿ ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ನಿಖರ ಕಾರಣ ತಿಳಿಯಲು ತನಿಖೆ ಮುಂದುವರಿಸಿದ್ದೇವೆ ಎಂದು ತಿಳಿಸಿದ್ದಾರೆ

ಈ ಘಟನೆಯಿಂದ ರಬಿಯಾ ಭಾನು ಪತಿ ಕೂಡ ಶಾಕ್‌ಗೆ ಒಳಗಾಗಿದ್ದಾರೆ. ಸ್ಥಳ ಪರಿಶೀಲನೆ ನಡೆಸಿದ ಬಳಿಕ ಬೆಟ್ಟದಪುರ ಪೊಲೀಸರು ಮೃತದೇಹಗಳನ್ನ ಮರಣೋತ್ತರ ಪರೀಕ್ಷೆಗೆ ಕಳಿಸಿದ್ದಾರೆ. ಸ್ಥಳೀಯರು ಹೇಳುವಂತೆ, ರಬಿಯಾ ಭಾನು ಕೆಲ ತಿಂಗಳಿಂದ ಮಾನಸಿಕ ಒತ್ತಡದಲ್ಲಿದ್ದರು ಎಂದು ಹೇಳಲಾಗ್ತಿದೆ. ಹೆಚ್ಚಿನ ತನಿಖೆ ಪ್ರಗತಿಯಲ್ಲಿದೆ.

## ಜನ್ ಸುರಾಜ್ ಪಕ್ಷದ ಕಾರ್ಯಕರ್ತನ ಹತ್ಯೆ ಕೇಸ್: ಜೆಡಿಯು ಅಭ್ಯರ್ಥಿ ಅನಂತ್ ಸಿಂಗ್ ಅರೆಸ್ಟ್



**ಪಾಟ್ನಾ**: ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನಕ್ಕೆ ಕೇವಲ ಕೆಲವೇ ದಿನಗಳು ಬಾಕಿ ಇರುವಾಗಲೇ ರಾಜ್ಯದ ರಾಜಕೀಯ ವಲಯದಲ್ಲಿ ಭಾರೀ ಆಘಾತಕಾರಿ ಬೆಳವಣಿಗೆ ನಡೆದಿದೆ. ಮೊಕಾಮಾ ಕ್ಷೇತ್ರದಿಂದ ಜನತಾದಳ ಯುನೈಟೆಡ್ (ಜೆಡಿಯು) ಅಭ್ಯರ್ಥಿಯಾಗಿರುವ ಮಾಜಿ ಶಾಸಕ ಅನಂತ್ ಸಿಂಗ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಜನ ಸುರಾಜ್ ಪಕ್ಷದ ಕಾರ್ಯಕರ್ತ ದುಲಾರ್ ಚಂದ್ ಯಾದವ್ ಅವರ ಹತ್ಯೆ ಪ್ರಕರಣದಲ್ಲಿ ಆರೋಪಿಯಾಗಿ ಹೆಸರಿಸಲ್ಪಟ್ಟಿರುವ 58 ವರ್ಷದ ಸಿಂಗ್ ಅವರ ಬಂಧನವು ಚುನಾವಣಾ ಪ್ರಚಾರದಲ್ಲಿ ಹೊಸ ತಿರುವು ನೀಡಿದೆ.

ಪಾಟ್ನಾ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಎಸ್‌ಪಿ) ಕಾರ್ತಿಕೇಯ ಶರ್ಮಾ ಅವರು ಭಾನುವಾರ ಮಾಧ್ಯಮಗಳಿಗೆ ತಿಳಿಸಿದಂತೆ, ಅನಂತ್ ಸಿಂಗ್ ಅವರನ್ನು ಅವರ ನಿವಾಸದಿಂದಲೇ ಬಂಧಿಸಲಾಗಿದೆ. ರಾಜ್ಯ ರಾಜಧಾನಿ ಪಾಟ್ನಾದಿಂದ ಸುಮಾರು 200 ಕಿಲೋಮೀಟರ್ ದೂರದಲ್ಲಿರುವ ಬರ್ಹ ಗ್ರಾಮದಲ್ಲಿರುವ ಅವರ ಮನೆಯಲ್ಲಿ ಪೊಲೀಸ್ ತಂಡ ದಾಳಿ ನಡೆಸಿ, ಸುಮಾರು 2 ಗಂಟೆಗಳ ಹಿಂದೆ ಬಂಧಿಸಿದೆ. ಈ ಬಂಧನದೊಂದಿಗೆ ಒಟ್ಟು ಐವರು ಆರೋಪಿಗಳು ಪೊಲೀಸ್ ಬಲೆಗೆ ಬಿದ್ದಿದ್ದಾರೆ.

ಗುರುವಾರ ಸಂಜೆ ಮೊಕಾಮಾ ಪ್ರದೇಶದಲ್ಲಿ ಜನ ಸುರಾಜ್ ಪಕ್ಷದ ಅಭ್ಯರ್ಥಿ ಪಿಯೂಷ್ ಪ್ರಿಯದರ್ಶಿ ಅವರ ಪರ ಪ್ರಚಾರ ನಡೆಸುತ್ತಿದ್ದ ದುಲಾರ್ ಚಂದ್ ಯಾದವ್ ಅವರನ್ನು ದುಷ್ಕರ್ಮಿಗಳು ಗುಂಡಿಕ್ಕಿ ಕೊಂದಿದ್ದಾರೆ. ಈ ಹತ್ಯೆಯು ರಾಜ್ಯದಲ್ಲಿ ಚುನಾವಣಾ ಹಿಂಸಾಚಾರದ ಆತಂಕವನ್ನು ಹೆಚ್ಚಿಸಿದೆ. ಮರಣೋತ್ತರ ವರದಿ ಪ್ರಕಾರ, ಯಾದವ್ ಅವರ ಹೃದಯ ಮತ್ತು ಶ್ವಾಸಕೋಶಗಳಿಗೆ ತೀವ್ರ ಗಾಯಗಳಾಗಿದ್ದು, ಹೃದಯರಕ್ತನಾಳದ ವೈಫಲ್ಯದಿಂದ ಸಾವು ಸಂಭವಿಸಿದೆ. ಈ ಘಟನೆಯ ನಂತರ ಜನ ಸುರಾಜ್ ಪಕ್ಷದ ಕಾರ್ಯಕರ್ತರು ಮತ್ತು ನಾಯಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಪಕ್ಷದ ಸ್ಥಾಪಕ ಪ್ರಶಾಂತ್ ಕಿಶೋರ್ ಅವರು ಈ ಹತ್ಯೆಯನ್ನು ರಾಜಕೀಯ ದೌರ್ಜನ್ಯದ ಉದಾಹರಣೆಯೆಂದು ಕರೆದು, ಜೆಡಿಯು ಸರ್ಕಾರದ ವಿರುದ್ಧ ಆರೋಪ ಮಾಡಿದ್ದರು.

ಅನಂತ್ ಸಿಂಗ್ ಅವರು ಬಿಹಾರದ ರಾಜಕಾರಣದಲ್ಲಿ ವಿವಾದಾತ್ಮಕ ವ್ಯಕ್ತಿತ್ವ ಹೊಂದಿದ್ದಾರೆ. ಮಾಜಿ ಶಾಸಕರಾಗಿ ಹಲವು ಬಾರಿ ಗ್ಯಾಂಗ್‌ಸ್ಟರ್ ಆರೋಪಗಳನ್ನು ಎದುರಿಸಿರುವ ಅವರು, ಈಗ ಜೆಡಿಯು ಟಿಕೆಟ್‌ನಲ್ಲಿ ಮೊಕಾಮಾ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ. ಅವರ ಬಂಧನವು ಜೆಡಿಯು ಪಕ್ಷಕ್ಕೆ ಭಾರೀ ತಲೆನೋವು ತಂದೊಡ್ಡಿದೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಪಕ್ಷವು ಈ ಘಟನೆಯಿಂದ ಚುನಾವಣಾ ಪ್ರಚಾರದಲ್ಲಿ ಹಿನ್ನಡೆ ಅನುಭವಿಸುವ ಸಾಧ್ಯತೆಯಿದೆ.

ಪೊಲೀಸ್ ಅಧಿಕಾರಿ ಕಾರ್ತಿಕೇಯ ಶರ್ಮಾ ಅವರು ಮತದಾರರಿಗೆ ಭರವಸೆ ನೀಡುತ್ತಾ, "ಪಾಟ್ನಾ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚುನಾವಣೆ ಶಾಂತಿಯುತವಾಗಿ ನಡೆಯಲಿದೆ. ಮತದಾರರು ನಿರ್ಭಯವಾಗಿ ಹೊರಗೆ ಬಂದು ತಮ್ಮ ಹಕ್ಕು ಚಲಾಯಿಸಬಹುದು. ಪೊಲೀಸ್ ಮತ್ತು ಆಡಳಿತ ಯಂತ್ರ ಮತದಾರರೊಂದಿಗೆ ನಿಂತಿದೆ. ಯಾರೂ ಈ ಹಕ್ಕನ್ನು ತಡೆಯಲಾರರು" ಎಂದು ಘೋಷಿಸಿದ್ದಾರೆ.

## ಲಂಡನ್ ಪ್ರಯಾಣಿಕರಿಗೆ ಚೂರಿ ಇರಿದ ದುಷ್ಕರ್ಮಿಗಳು



**ಲಂಡನ್**: ಬ್ರಿಟನ್‌ನಲ್ಲಿ ಶನಿವಾರ ರಾತ್ರಿ ರೈಲಿನಲ್ಲಿ ನಡೆದ ಸಾಮೂಹಿಕ ಚಾಕು ದಾಳಿಯಲ್ಲಿ 10 ಜನರು ಗಂಭೀರವಾಗಿ ಗಾಯಗೊಂಡಿದ್ದಾರೆ. ಅವರಲ್ಲಿ ಒಂಬತ್ತು ಮಂದಿಗೆ ಮಾರಣಾಂತಿಕವಾಗಿ ಗಾಯಗಳಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಘಟನೆಯು ಕೇಂಬ್ರಿಡ್ಜ್ ವಿಶ್ವವಿದ್ಯಾಲಯದ ನಗರದ ವಾಯುವ್ಯಕ್ಕೆ ಸಮೀಪದ ಮಾರುಕಟ್ಟೆ ಪಟ್ಟಣ ಹಂಟಿಂಗ್‌ಡನ್ ಬಳಿ ಸಂಭವಿಸಿದ್ದು, ರೈಲು ದಕ್ಷಿಣ ದಿಕ್ಕಿನಲ್ಲಿ ಸಾಗುತ್ತಿದ್ದಾಗ ದುಷ್ಕರ್ಮಿಗಳು ಪ್ರಯಾಣಿಕರ ಮೇಲೆ ಸುಖಾಸುಮ್ಮನೆ ಚಾಕುಗಳಿಂದ ಇರಿದಿದ್ದಾರೆ.

ಈ ಘಟನೆಯು ಲಂಡನ್ ಮಹಾನಗರದ ಹೊರವಲಯದ ರೈಲ್ವೆ ನಿಲ್ದಾಣಗಳಲ್ಲಿ ನಡೆದಿದ್ದು, ಶನಿವಾರ ಸಂಜೆ 7:39ರ ಸುಮಾರಿಗೆ ಅಧಿಕಾರಿಗಳಿಗೆ ಮಾಹಿತಿ ದೊರೆತ ತಕ್ಷಣ ಸಶಸ್ತ್ರ ಪೊಲೀಸರು, ಏರ್ ಆಂಬ್ಯುಲೆನ್ಸ್‌ಗಳು ಸೇರಿದಂತೆ ತುರ್ತು ಸೇವೆಗಳು ಸ್ಥಳಕ್ಕೆ ಧಾವಿಸಿದವು. ರೈಲು ಹಂಟಿಂಗ್‌ಡನ್‌ಗೆ ತಲುಪುತ್ತಿದ್ದಂತೆಯೇ ದಾಳಿಯ ತೀವ್ರತೆ ಬಯಲಾಯಿತು. ಬ್ರಿಟಿಷ್ ಸಾರಿಗೆ ಪೊಲೀಸ್ (ಬಿಟಿಪಿ) ಈ ಘಟನೆಯನ್ನು "ಪ್ರಮುಖ ಘಟನೆ" ಎಂದು ಘೋಷಿಸಿ, ತನಿಖೆಯ ಮುಂದಾಳತ್ವ ವಹಿಸಿಕೊಂಡಿದೆ. ಭಾನುವಾರ ಮುಂಜಾನೆ ದಾಳಿಯ ಕೆಲವು ಗಂಟೆಗಳ ನಂತರವೇ ಇಬ್ಬರು ಶಂಕಿತ ಆರೋಪಿಗಳನ್ನು ನಿಲ್ದಾಣದಲ್ಲಿ ಬಂಧಿಸಲಾಗಿದೆ ಎಂದು ಕೇಂಬ್ರಿಡ್ಜ್‌ಶೈರ್ ಕಾನ್‌ಸ್ಟಾಬ್ಯುಲರಿ ತಿಳಿಸಿದೆ.

ಬಿಟಿಪಿ ಅಧಿಕಾರಿಗಳ ಹೇಳಿಕೆಯಲ್ಲಿ, "ಹಂಟಿಂಗ್‌ಡನ್ ಸಮೀಪಿಸುತ್ತಿದ್ದ ರೈಲಿನಲ್ಲಿ ಹಲವು ಜನರಿಗೆ ಚಾಕು ಇರಿತವಾಗಿದೆ. ಹತ್ತು ಜನರನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಒಂಬತ್ತು ಮಂದಿಗೆ ಗಂಭೀರ ಗಾಯಗಳಾಗಿವೆ. ಭಯೋತ್ಪಾದಕ ನಿಗ್ರಹ ದಳ ನಮ್ಮ ತನಿಖೆಯನ್ನು ಬೆಂಬಲಿಸುತ್ತಿದೆ. ಘಟನೆಯ ಸಂಪೂರ್ಣ ಸಂದರ್ಭಗಳು ಮತ್ತು ಪ್ರೇರಣೆಯನ್ನು ಸ್ಥಾಪಿಸಲು ನಾವು ತೀವ್ರವಾಗಿ ಕೆಲಸ ಮಾಡುತ್ತಿದ್ದೇವೆ" ಎಂದು ತಿಳಿಸಿದ್ದಾರೆ.

ದಾಳಿಯ ಹಿಂದಿನ ಉದ್ದೇಶದ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಬಿಚ್ಚಿಡದಿದ್ದರೂ, ಹೊರದೇಶಗಳಿಂದ ವಲಸೆ ಬಂದವರ ಸಂಬಂಧ ಶಂಕೆ ವ್ಯಕ್ತವಾಗುತ್ತಿದೆ. ಬ್ರಿಟನ್‌ನ ಭಯೋತ್ಪಾದಕ ನಿಗ್ರಹ ದಳ ಈ ಪ್ರಕರಣವನ್ನು ಕೈಗೆತ್ತಿಕೊಂಡು, ಆಂತರಿಕ ಭದ್ರತಾ ಬೆದರಿಕೆಗಳನ್ನು ಪರಿಶೀಲಿಸುತ್ತಿದೆ.

ಯುಕೆಯ ಈಸ್ಟ್ ಕೋಸ್ಟ್ ಮೇನ್‌ಲೈನ್ ಸೇವೆಗಳನ್ನು ನಿರ್ವಹಿಸುವ ಲಂಡನ್ ನಾರ್ತ್ ಈಸ್ಟರ್ನ್ ರೈಲ್ವೆ (ಎಲ್‌ಎನ್‌ಇಆರ್) ಕಂಪೆನಿ ಈ ಘಟನೆಯನ್ನು ತನ್ನ ರೈಲೊಂದರಲ್ಲಿ ನಡೆದಿದ್ದನ್ನು ದೃಢಪಡಿಸಿದೆ. ರೈಲು ಸೇವೆಗಳು ತಾತ್ಕಾಲಿಕವಾಗಿ ಅಡಚಣೆಗೊಳಗಾಗಿದ್ದು, ಪ್ರಯಾಣಿಕರಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ. ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್ ಈ ಭೀಕರ ಘಟನೆಗೆ ತೀವ್ರ ಕಳವಳ ವ್ಯಕ್ತಪಡಿಸಿ, "ಹಂಟಿಂಗ್‌ಡನ್ ಬಳಿಯ ರೈಲಿನಲ್ಲಿ ನಡೆದ ದಾಳಿ ತೀವ್ರ ಆತಂಕಕಾರಿ. ಬಾಧಿತರೊಂದಿಗೆ ನನ್ನ ಆಲೋಚನೆಗಳಿವೆ. ತುರ್ತು ಸೇವೆಗಳ ಪ್ರತಿಕ್ರಿಯೆಗೆ ಧನ್ಯವಾದಗಳು. ಪ್ರದೇಶದ ಜನರು ಪೊಲೀಸರ ಸಲಹೆ ಪಾಲಿಸಬೇಕು" ಎಂದು ಟ್ವೀಟ್ ಮಾಡಿದ್ದಾರೆ.

## ಕೆ-ಸೆಟ್ ಪರೀಕ್ಷೆ ವಿದ್ಯಾರ್ಥಿಗಳ ಕಿವಿಯೋಲೆ, ಮೂಗುತಿ ಬಿಚ್ಚಿಸಿದ ಸಿಬ್ಬಂದಿ



**ಬಳ್ಳಾರಿ**: ಇಂದು ಕೆ-ಸೆಟ್ ಪರೀಕ್ಷೆ ಹಿನ್ನೆಲೆ ಬಳ್ಳಾರಿಯಲ್ಲಿ (Ballari) ವಿದ್ಯಾರ್ಥಿಗಳ ಕಿವಿಯೋಲೆ, ಮೂಗುತಿ, ಕೈಕಡಗ ಸೇರಿದಂತೆ ಮೈಮೇಲೆ ಹಾಕಿಕೊಂಡಿರೋ ದೇವರ ದಾರವನ್ನು ಸಹ ಬಿಚ್ಚಿಸಿ ಅಭ್ಯರ್ಥಿಗಳನ್ನು ಒಳಗೆ ಕಳುಹಿಸಿದ ಘಟನೆ ನಡೆದಿದೆ.

ಕಿವಿಯೋಲೆ, ಮೂಗುತಿ ಹಾಗೂ ದೇವರ ದಾರ ಬಿಚ್ಚಿಸಿದ್ದಕ್ಕೆ ಕೆಲ ಪರೀಕ್ಷಾರ್ಥಿಗಳು ಅಸಮಾಧಾನ ವ್ಯಕ್ತಪಡಿಸಿದರು. ಅಸಮಾಧಾನದ ನಡುವೆಯೂ ಅನಿವಾರ್ಯವಾಗಿ ಪರೀಕ್ಷೆಗೆ ವಿದ್ಯಾರ್ಥಿಗಳು ಹಾಜರಾದರು. ಇನ್ನೂ ಪರೀಕ್ಷೆ ಮುಗಿಸಿಕೊಂಡು ಹೊರಬಂದ ಬಳಿಕ ಪ್ರತಿಕ್ರಿಯೆ ನೀಡಿದ ಪರೀಕ್ಷಾರ್ಥಿಗಳು ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಅಸಮಾಧಾನ ಹೊರಹಾಕಿದರು ಕಿವಿಯೋಲೆ, ಮೂಗುತಿ ಬಿಚ್ಚಿಸಿದ್ದು ನಮ್ಮ ಮನಸ್ಸಿಗೆ ಬೇಜಾರಾಗಿದೆ. ನಮಗೆ ಮಾಂಗಲ್ಯ, ಕಾಲುಂಗುರ ಹೇಗೋ, ಹಾಗೇ ಮೂಗುತಿಯೂ ಬಹಳ ಮುಖ್ಯ

ಆದ್ರೂ ನಿಯಮ ಪಾಲನೆ ಮಾಡಬೇಕು ಅನ್ನೋ ಕಾರಣಕ್ಕೆ ಅನಿವಾರ್ಯವಾಗಿ ಬಿಚ್ಚಿಟ್ಟು ಹೋಗಿದ್ದೇವೆ ಎಂದರು. ಬಳ್ಳಾರಿಯಲ್ಲಿ 20 ಪರೀಕ್ಷಾ ಕೇಂದ್ರಗಳಲ್ಲಿ ಬೆಳಗ್ಗೆ 10ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಕೆ-ಸೆಟ್ ಪರೀಕ್ಷೆಗಳು ನಡೆಸಲಾಯಿತು. ಪರೀಕ್ಷಾ ಕೇಂದ್ರಗಳ ಸುತ್ತಲೂ ಇರುವ ಜೆರಾಕ್ಸ್ ಸೆಂಟರ್ ಮತ್ತು ಇಂಟರ್ ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದರು.

## 2ನೇ ಬಾರಿಗೆ ಚಿಕ್ಲಿಹೊಳೆ ಜಲಾಶಯ ಭರ್ತಿ – ಮತ್ತೆ ಹೆಚ್ಚಿದ ಪ್ರವಾಸಿಗರ ದಂಡು

**ಬಾಗಲಕೋಟೆ**: ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ (ಪಿಕೆಪಿಎಸ್) ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆ ವೇಳೆ ಬಟ್ಟೆ ಹರಿಯುವ ರೀತಿ ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರು ಹೊಡೆದಾಡಿಕೊಂಡಿದ್ದಾರೆ. ಬಾಗಲಕೋಟೆಯ ರನ್ನಬೆಳಗಲಿ ಗ್ರಾಮದಲ್ಲಿ ಅಕ್ಟೋಬರ್ 29ರಂದು ಘಟನೆ ನಡೆದಿದ್ದು, ಮಾರಾಮಾರಿಯ ವಿಡಿಯೋ ಈಗ ವೈರಲ್ ಆಗಿದೆ.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಚುನಾವಣೆ ಅ.29ರಂದು ನಿಗದಿಯಾಗಿತ್ತು. ಒಟ್ಟು 13 ಜನ ಸದಸ್ಯರ ಬಲ ಹೊಂದಿರುವ ಪಿಕೆಪಿಎಸ್‌ಗೆ 6 ಜನ ಬಿಜೆಪಿ ಬೆಂಬಲಿತ, 6 ಜನ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಇತರೆ ಓರ್ವ ಅಖಾಡದಲ್ಲಿದ್ದರು. ಆ ಪೈಕಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಜಗದೀಶ್ ಮಾಳಗಿ, ಹರಳಯ್ಯ ಎಂಬುವರನ್ನು ಬಿಜೆಪಿಯವರು ಆಪರೇಷನ್ ಮೂಲಕ ಸೆಳೆದಿದ್ದಾರೆ. ಇವರಿಬ್ಬರು ಮತದಾನ ಮಾಡಲು ಪಿಕೆಪಿಎಸ್ ಕಚೇರಿಗೆ ಬಂದಾಗ ಅವರನ್ನ ತಡೆಯಲು ಕಾಂಗ್ರೆಸ್ ಕಾರ್ಯಕರ್ತರು ಮುಂದಾಗಿದ್ದಾರೆ.

ಇದೇ ವಿಚಾರಕ್ಕೆ ಉಭಯ ಪಕ್ಷಗಳ ಕಾರ್ಯಕರ್ತರ ನಡುವೆ ಮಾತಿಗೆ ಮಾತು ಬೆಳೆದಿದೆ. ಪರಿಸ್ಥಿತಿ ವಿಕೋಪಕ್ಕೆ ಹೋಗಿ ಮಾರಾಮಾರಿ ನಡೆದಿದೆ. ಕಾಂಗ್ರೆಸ್-ಬಿಜೆಪಿ ಕಾರ್ಯಕರ್ತರು ಹೊಡೆದಾಡಿಕೊಂಡಿದ್ದು ಮಾತ್ರವಲ್ಲದೆ ಕಟ್ಟಿಗೆ-ಕೋಲುಗಳಿಂದ ಪರಸ್ಪರ ಹಲ್ಲೆ ನಡೆಸಿದ್ದಾರೆ. ಈ ವೇಳೆ ಉದ್ರಿಕ್ತರ ನಿಯಂತ್ರಣಕ್ಕೆ ಮುಧೋಳ ಪೊಲೀಸರು ಹರಸಾಹಸಪಟ್ಟಿದ್ದು, ಅಂತಿಮವಾಗಿ ಲಘುಲಾಠಿ ಪ್ರಹಾರ ಮಾಡಿ ಕಾರ್ಯಕರ್ತರನ್ನು ಚದುರಿಸಿದ್ದಾರೆ. ಈ ಎಲ್ಲ ಬೆಳವಣಿಗೆ ಹಿನ್ನಲೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಚುನಾವಣೆಯನ್ನ ಮುಂದೂಡಲಾಗಿದೆ.

## ಕನ್ನಡ ಯುವಜನ ಸಭಾ(SYS) ನಾಯಕ ಕೋಣಂದೂರು ಲಿಂಗಪ್ಪ ರವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕಾರ



**ಬೆಂಗಳೂರು**:ರಾ ಜ್ಯದ ಮುಖ್ಯಮಂತ್ರಿಯಾಗಿ ಯಾರ ಹೆಸರನ್ನೂ ನಾನು ಪ್ರಶಸ್ತಿಗೆ ಶಿಫಾರಸ್ಸು ಮಾಡಿಲ್ಲ. ಆಯ್ಕೆ ಸಮಿತಿ ತೀರ್ಮಾನವೇ ಅಂತಿಮವಾಗಿ ಆಯ್ಕೆ ನಡೆದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ "70ನೇ ಕರ್ನಾಟಕ ರಾಜ್ಯೋತ್ಸವವನ್ನು ಉದ್ಘಾಟಿಸಿ 70 ಮಂದಿ ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿ ಮಾತನಾಡಿ ಕರ್ನಾಟಕ ಉದಯವಾಗಿ 70 ವರ್ಷಗಳಾಗಿರುವುದನ್ನು ಪರಿಗಣಿಸಿ 70 ಮಂದಿ ಸಾಧಕರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಒಂದೇ ವಿಭಾಗದಲ್ಲಿ ಒಬ್ಬರಿಗಿಂತ ಹೆಚ್ಚು ಸಾಧಕರ ಹೆಸರು ಇದ್ದ ಸಂದರ್ಭದಲ್ಲಿ ಮಾತ್ರ ಪ್ರಾದೇಶಿಕ ನ್ಯಾಯ, ಸಾಮಾಜಿಕ ನ್ಯಾಯದ ಕಾರಣಕ್ಕಾಗಿ ಅರ್ಹರಲ್ಲೇ ಒಬ್ಬರ ಹೆಸರನ್ನು ಅಂತಿಮಗೊಳಿಸಲಾಗಿದೆ

ಪ್ರಶಸ್ತಿ ಪುರಸ್ಕೃತರಾದ ಕೋಣಂದೂರು ಲಿಂಗಪ್ಪ ಅವರನ್ನುಉಲ್ಲೇಖಿಸಿ ಸಮಾಜವಾದಿ ಹೋರಾಟದ ದಿನಗಳನ್ನು ನೆನಪಿಸಿಕೊಂಡು ಸಮಾಜವಾದಿ ಯುವ ಜನ ಸಭಾ( SYS) ನಲ್ಲಿ ನನ್ನನು ಸದ್ಯಸರಾಗಿ ಮಾಡಿದರು ನಾನು ಸಹ ಕನ್ನಡ ಚಳುವಳಿ ಹೋರಾಟದಲ್ಲಿ ತೊಡಗಿಸಿಕೊಂಡಿದೆ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೆಲ್ಲರೂ ಶತಾಯುಶಿಗಳಾಗಿದರೆ ನಿಮ್ಮ ನಿಮ್ಮ ಕ್ಷೇತ್ರಗಳಲ್ಲಿ ಇನ್ನಷ್ಟು ಸಾಧನೆ ಮಾಡಿ ಪ್ರತಿಯೊಬ್ಬರ ಬದುಕು ಸಾರ್ಥಕವಾಗಲಿ ಎಂದು ಹಾರೈಸಿದರು.

ಉಪ ಮುಖ್ಯ ಮಂತ್ರಿ ಡಿ ಕೆ ಶಿವಕುಮಾರ್ ಮಾತನಾಡಿ ಅನೇಕ ಜನ ಸಮಾಜ ಸೇವೆಯ ಸಾಧಕರಿಂದ ಕರ್ನಾಟಕಕ್ಕೆ ವಿಶೇಷ ಹೆಸರು ಬಂದಿದೆ. ಸಿಕ್ಕಂತಹ ಅವಕಾಶ ಬಳಸಿಕೊಂಡು ಸಾಧನೆ ಮಾಡಿದವರು ಇಂದು ನಮ್ಮ ಕಣ್ಣ ಮುಂದೆ ಇದ್ದರೇ ಕನ್ನಡವನ್ನು ಉಸಿರಾಗಿಸಿಕೊಂಡು. ತಮ್ಮ ಜೀವನವನೇ ಕನ್ನಡ ಕರ್ನಾಟಕಗಾಗಿ ಬದುಕಿದ ಸಾಧಕರಿವರು ಎಂದರು.

ಕನ್ನಡ ಮತ್ತು ಸಂಸ್ಕೃತಿ ಹಿಂದುಳಿದ ವರ್ಗದ ಸಚಿವಶಿವರಾಜ ಎಸ್.ತಂಗಡಗಿ ಮಾತನಾಡಿ ಸಮಾಜವನ್ನು ಕಟ್ಟುವ ನಿಜವಾದ ನಾಯಕರು ನಾಡು ನುಡಿಗಾಗಿ ಕನ್ನಡ ಕಟ್ಟಿ ಉಳಿಸಿಬೆಳೆಸಿದ ಕನ್ನಡ ಯುವ ಜನ ಸಭಾ ದ ನಾಯಕ ಕೋಣಂದೂರು ಲಿಂಗಪ್ಪ ರವರಿಗೆ ಆಯ್ಕೆ ಮಾಡಿ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಸಿತ್ತಿರುವುದು ನಿಜ್ವಾಗ್ಲೂ ನಮ್ಮಗೆ ಬಹಳ ಸಂತೋಷ ತಂದಿದ್ದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.ಕಾರ್ಯಕ್ರಮ ದಲ್ಲಿ ಅನೇಕ ಗಣ್ಯ ಮಾನ್ಯರು ಭಾಗವಹಿಸಿದರು

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.